ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಉದಯಿಸಿದ ನಕ್ಷತ್ರ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily
ಡಿಜಿಟಲ್ ನ್ಯೂಸ್ ಚಾನಲ್
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:135 Date:13-06-2026 Saturday RNI NO : KARKAN/2021/80805 L2/RNP-1285/TMR/2025-27 Page :4 Price: 1.00
ಸಂಪುಟ: 05 ಸಂಚಿಕೆ: 135 ಪುಟ : 4 ಬೆಲೆ: 1.00 ರೂ

ಬೆಂಗಳೂರಿನಲ್ಲಿ ಸಂಚಾರ ನಿಯಮಗಳ ಕಟ್ಟುನಿಟ್ಟಿನ ಜಾರಿ; ಗ್ರಾಮೀಣ ಪ್ರದೇಶದ 50 ಸರ್ಕಾರಿ ಶಾಲೆಗಳಲ್ಲಿ AI ಪ್ರಯೋಗಾಲಯ ಸ್ಥಾಪನೆ: ಪ್ರಿಯಾಂಕ್ ಖರ್ಗೆ



ಬೆಂಗಳೂರು: ಬೆಂಗಳೂರನಲ್ಲಿ ಸಂಚಾರ ಸುರಕ್ಷತೆ, ಸಂಚಾರ ನಿಯಮಗಳ ಕಟ್ಟುನಿಟ್ಟಿನ ಜಾರಿ ಮತ್ತು ಟ್ರಾಫಿಕ್ ಪೊಲೀಸರ ಕಾರ್ಯಕ್ಷಮತೆ ವೃದ್ಧಿಗೆ ಒತ್ತು ನೀಡುವ ನಿಟ್ಟಿನಲ್ಲಿ ಕಾರ್ಯಯೋಜನೆ ರೂಪಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಶುಕ್ರವಾರ ತಿಳಿಸಿದರು.

ಬೆಂಗಳೂರು ಸಂಚಾರ ಪೊಲೀಸ್ ನಿರ್ವಹಣಾ ಕೇಂದ್ರಕ್ಕೆ ಭೇಟಿ ನೀಡಿ ಬೆಂಗಳೂರಿನ ಟ್ರಾಫಿಕ್ ವ್ಯವಸ್ಥೆಯ ಬಗ್ಗೆ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಮಾಹಿತಿ ಪಡೆದುಕೊಂಡ ಸಚಿವರು,ಇಂದು ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಪರಿಣಾಮಕಾರಿಯಾಗಿ ಟ್ರಾಫಿಕ್ ನಿರ್ವಹಣೆ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಲಾಗುವುದು ಎಂದರು.

ಬೆಂಗಳೂರಿನಲ್ಲಿ ಜನಸಂಖ್ಯೆಯ ವಾರ್ಷಿಕ ಬೆಳವಣಿಗೆ ದರ 3.7% ರಷ್ಟಿದ್ದರೆ, ವಾಹನಸಂಖ್ಯೆಯ ಬೆಳವಣಿಗೆ ದರ 10%ರಷ್ಟಿದೆ, ಉದ್ಯೋಗ ಸೃಷ್ಟಿ ಹಾಗೂ ಆರ್ಥಿಕ ಚಟುವಟಿಕೆಗಳ ಬೆಳವಣಿಗೆಯಲ್ಲಿ ಮುಂಚೂಣಿ ನಗರವಾಗಿರುವ ಬೆಂಗಳೂರು ಪರಿಣಾಮಕಾರಿ ಟ್ರಾಫಿಕ್ ನಿರ್ವಹಣಾ ವ್ಯವಸ್ಥೆಯನ್ನು ಹೊಂದಿದೆ ಎಂದು ತಿಳಿಸಿದರು.

ನಾಲ್ಕು ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆಂಗಳೂರು ಟ್ರಾಫಿಕ್ ಪೊಲೀಸ್ 53 ಪೊಲೀಸ್ ಠಾಣೆಯನ್ನು ಹೊಂದಿದೆದ್ದು, ಸುಮಾರು 1.25 ನೋಂದಾಯಿತ ವಾಹನಗಳಿರುವ ಬೆಂಗಳೂರು ನಗರದಲ್ಲಿ ಟ್ರಾಫಿಕ್ ಪೊಲೀಸ್ ವ್ಯವಸ್ಥೆಯು ಸುಮಾರು 14,000 ಕಿಲೋಮೀಟರ್ ರಸ್ತೆ ಜಾಲದ ಟ್ರಾಫಿಕ್ ನಿರ್ವಹಿಸುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮಾಹಿತಿ ನೀಡಿದರು. ಸಂಚಾರ ಪೊಲೀಸ್ ವಸ್ತುಸಂಗ್ರಾಹಾಲಯ ವೀಕ್ಷಿಸಿದರಲ್ಲೆ, ಕ್ಯಾಮರಾ ಟ್ರ್ಯಾಕಿಂಗ್ ವಿಭಾಗಕ್ಕೆ ಭೇಟಿ ನೀಡಿ ಕಾರ್ಯಾಚರಣೆಯನ್ನು ವೀಕ್ಷಿಸಿದರು.

10 ಕೋಟಿ ವೆಚ್ಚದಲ್ಲಿ ಅತ್ಯಾಧುನಿಕ ಎಐ ಪ್ರಯೋಗಾಲಯ ಸ್ಥಾಪನೆ: ಈ ಮಧ್ಯೆ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಶೀಲತೆ ಹೆಚ್ಚಿಸಲು ರಾಜ್ಯದ 2 ಮತ್ತು 3ನೆ ಶ್ರೇಣಿಯ ನಗರ, ಪಟ್ಟಣಗಳ 50 ಸರ್ಕಾರಿ ಕಾಲೇಜಗಳಲ್ಲಿ □10 ಕೋಟಿ ವೆಚ್ಚದಲ್ಲಿ ಅತ್ಯಾಧುನಿಕ ಕೃತಕ ಬುದ್ಧಿಮತ್ತೆ (ಎಐ) ಪ್ರಯೋಗಾಲಯಗಳನ್ನು ಸ್ಥಾಪಿಸಲು ಕರ್ನಾಟಕ




ರಾಜ್ಯ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಇಲಾಖೆ ಸಚಿವರು ಆಗಿರುವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಪ್ರಸಕ್ತ ಹಣಕಾಸು ವರ್ಷದ (2026–27) ಬಜೆಟ್‌ನಲ್ಲಿ ಘೋಷಿಸಿದಂತೆ, ಗ್ರಾಮೀಣ ಪ್ರದೇಶದ ಯುವ ಜನರನ್ನು ಅಗತ್ಯ ಕೌಶಲದ ಜೊತೆ ಉದ್ಯೋಗಶೀಲರನ್ನಾಗಿ ಮಾಡಲು ಕೇಂದ್ರ ಸರ್ಕಾರದ ಎಐ ಮಿಷನ್ ಸಹಭಾಗಿತ್ವದಲ್ಲಿ □ಎಐ□ ಪ್ರಯೋಗಾಲಯಗಳನ್ನು ಆರಂಭಿಸಲು ಉದ್ದೇಶಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಆಯ್ಕೆ ಮಾಡಲಾಗುವ ಶಿಕ್ಷಣ ಸಂಸ್ಥೆ, ಕಾಲೇಜ್‌ಗಳಲ್ಲಿ ಆಧುನಿಕ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಒಳಗೊಂಡ ಪ್ರಯೋಗಾಲಯಗಳನ್ನು ಸ್ಥಾಪಿಸಿ, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ, ಕೌಶಲ ಅಭಿವೃದ್ಧಿ ಮತ್ತು ಹೊಸ ಆವಿಷ್ಕಾರಗಳಿಗೆ ಅವಕಾಶ ಕಲ್ಪಿಸಿಕೊಡಲಾಗುವುದು. ಯುವಜನರು ಇತ್ತೀಚಿನ ತಂತ್ರಜ್ಞಾನಗಳನ್ನು ಕರಗತ ಮಾಡಿಕೊಳ್ಳಲು ಮತ್ತು ಉದ್ಯೋಗಾರ್ಹತೆ ಹೆಚ್ಚಿಸಿಕೊಳ್ಳಲು ಇದು ಎಂದು ಸಚಿವರು ಹೇಳಿದ್ದಾರೆ.

ಕೇಂದ್ರ ಸರ್ಕಾರ ಎಐ ಮಿಷನ್ – ಯೋಜನೆಯಡಿ ಪ್ರತಿಯೊಂದು ಪ್ರಯೋಗಾಲಯಕ್ಕೆ 3 ವರ್ಷಗಳ ಅವಧಿಗೆ □68.98 ಲಕ್ಷ ಮೊತ್ತದ ನೆರವು ನೀಡಲಿದೆ. ಈ ಮೊತ್ತವನ್ನು 3 ಕಂತುಗಳಲ್ಲಿ ಬಿಡುಗಡೆ ಮಾಡಲಾಗುವುದು. ಇದಕ್ಕೆ ಪೂರಕವಾಗಿ ರಾಜ್ಯ ಬಜೆಟ್‌ನಲ್ಲಿ ಘೋಷಿಸಿರುವಂತೆ □10 ಕೋಟಿ ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ, ಮೊದಲ ವರ್ಷಕ್ಕೆ □6.29 ಕೋಟಿ ಬಿಡುಗಡೆ ಮಾಡಲಾಗುತ್ತಿದೆ, ಮೊದಲ ಹಂತದಲ್ಲಿ ಕೃತಕ ಬುದ್ಧಿಮತ್ತೆ ದತ್ತಾಂಶ ಪ್ರಯೋಗಾಲಯಗಳನ್ನು ಸ್ಥಾಪಿಸಲು 23 ಶೈಕ್ಷಣಿಕ ಸಂಸ್ಥೆಗಳನ್ನು ಆಯ್ಕೆ ಮಾಡಿರುವುದಕ್ಕೂ ಸರ್ಕಾರದ ಅನುಮೋದನೆ ದೊರೆತಿದೆ ಎಂದೂ ಸಚಿವರು ವಿವರಿಸಿದ್ದಾರೆ.

ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ, ಡಿ.ಕೆ.ಶಿವಕುಮಾರ್ ಅವರೇ ಮುಖ್ಯಮಂತ್ರಿ ಸತೀಶ್ ಜಾರಕಿಹೊಳಿ



ಬೆಂಗಳೂರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಮುಂದಿನ ವಿಧಾನಸಭೆ ಚುನಾವಣೆ ನಡೆದು ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ, ಡಿ.ಕೆ.ಶಿವಕುಮಾರ್ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುವುದರಲ್ಲಿ ತಪ್ಪಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲಸ ಮಾಡಿದವರಿಗೆ ಕೂಲಿ ಸಿಗಬೇಕು ಎಂಬುದಕ್ಕೆ ನನ್ನ ಸಹಮತ ಇದೆ. 2028ರ ವಿಧಾನಸಭೆ ಚುನಾವಣೆಗೆ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ತಯಾರಿ ನಡೆಸುವುದಾಗಿ ನಾವೆಲ್ಲರೂ ಈಗಾಗಲೇ ಹೇಳಿದ್ದೇವೆ ಎಂದರು.ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಗದೇ ಇರುವುದಕ್ಕೆ ತಮಗೆ ಯಾವುದೇ ಬೇಸರವಿಲ್ಲ. ಹರಿಪ್ರಸಾದ್ ಅವರಿಗೆ ಈಗಾಗಲೇ ಹೈಕಮಾಂಡ್ ಜವಾಬ್ದಾರಿ ನೀಡಿದೆ. ಅವರಿಗೆ ಸುದೀರ್ಘ ಪಕ್ಷ ಸಂಘಟನೆಯ ಅನುಭವ ಇದೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಪಕ್ಷವನ್ನು ಮರಳಿ ಅಧಿಕಾರಕ್ಕೆ ತರುವುದಾಗಿ ಹೇಳುತ್ತಿದ್ದಾರೆ, ಸಂತೋಷ. ಇದಕ್ಕೆ ನನ್ನ ಬೆಂಬಲವಿದೆ ಎಂದಿದ್ದಾರೆ.ಮುಂದಿನ ಚುನಾವಣೆಯಲ್ಲೆ□ ಮುಖ್ಯಮಂತ್ರಿಯಾಗಬೇಕೆಂಬ ಆತುರತೆ ತಮಗಿಲ್ಲ, ಇನ್ನೂ ವಯಸ್ಸು ಇದೆ. ಹೈಕಮಾಂಡ್ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶ ನೀಡಿದೆ. ಅವರು ಯಶಸ್ವಿಯಾಗಲಿ ಎಂದು ಹೇಳಿದರು.

ಹೊಸದಾಗಿ ಇಲಾಖೆಗಳು ಖಾತೆ ನಿರ್ವಹಣೆ ಮಾಡುವವರು ಟೇಕಾಫ್ ಆಗಲು 6 ತಿಂಗಳ ಸಮಯಬೇಕಿದೆ. ಗೃಹಲಕ್ಷ್ಮಿ ಯೋಜನೆಯಲ್ಲಿ ದುರುಪಯೋಗಕ್ಕೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಲಾಗುತ್ತಿದೆ. 3 ಲಕ್ಷ ರೂ. ಕೊಟ್ಟು ವಿಮಾನದಲ್ಲಿ ಪ್ರಯಾಣಿಸುವವರಿಗೆ ಗೃಹಲಕ್ಷ್ಮಿ ಸೌಲಭ್ಯ ಬೇಕಿಲ್ಲ, ಜಿಎಸ್‌ಟಿ ಮತ್ತು ಆದಾಯ ತೆರಿಗೆ ಪಾವತಿಸುವವರಿಗೂ ಸೌಲಭ್ಯ ದೊರೆಯುತ್ತಿದ್ದರೆ ಅದನ್ನು ಪರಿಷ್ಕರಣೆ ಮಾಡುವುದು ಅನಿವಾರ್ಯ ಎಂದರು. ಮೊದಲು ಪಕ್ಷ ಅಧಿಕಾರಕ್ಕೆ ಬರಬೇಕು. ನಂತರ ಮುಖ್ಯಮಂತ್ರಿ ಆಯ್ಕೆಯ ಬಗ್ಗೆ ಚರ್ಚೆಯಾಗಲಿ ಎಂದು ಹೇಳಿದರು.

ಖಾತೆ ಹಂಚಿಕೆ ಕುರಿತಂತೆ ರಾಮಲಿಂಗಾರೆಡ್ಡಿ ಅವರಿಗಿದ್ದ ಅಸಮಾಧಾನವನ್ನು ಈಗಾಗಲೇ ಬಗೆಹರಿಸಲಾಗಿದೆ. ಅದೇ ರೀತಿ ಸಚಿವ ಕೃಷ್ಣಭೈರೇಗೌಡ ಅವರಲ್ಲೂ ಅಸಮಾಧಾನಗಳಿದ್ದರೆ, ಪಕ್ಷ ಮತ್ತು ಸರ್ಕಾರದ ಮುಖಂಡರು ಬಗೆ ಹರಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ತಮಗೆ ಕ್ರಿ□ಡಾ ಇಲಾಖೆಯ ಮೇಲೆ ಹೆಚ್ಚಿನ ಆಸಕ್ತಿಯಿತ್ತು. ಧರ್ಮಸಿಂಗ್ ಸಂಪುಟದಲ್ಲಿ ಸಚಿವನಾಗಿದ್ದಾಗ ಕ್ರಿ□ಡಾ ಇಲಾಖೆ ಖಾತೆ ಒಂದನ್ನೆ□ ಕೊಡುವಂತೆ ಮನವಿ ಮಾಡಿದ್ದೆ. ಆದರೆ ಅದು ಸಾಧ್ಯವಾಗಲಿಲ್ಲ. ಈಗಲೂ ತಾವು ಕ್ರಿ□ಡಾ ಇಲಾಖೆಗಾಗಿ ಬೇಡಿಕೆ ಇಟ್ಟಿದ್ದಾಗಿ ತಿಳಿಸಿದರು. ಆದರೆ ಉಪ ಮುಖ್ಯಮಂತ್ರಿ ಪರಮೇಶ್ವರ್ ಅವರಿಗೆ ಕ್ರಿ□ಡಾ ಇಲಾಖೆ ಖಾತೆ ಕೊಟ್ಟಿರುವುದರಿಂದ ಪದೇ ಪದೇ ಅದೇ ವಿಚಾರ ಕೆಣಕುವುದರಲ್ಲಿ ಅರ್ಥವಿಲ್ಲ ಎಂದರು.

ಎಕ್ಸ್‌ಪ್ರೆಸ್ ಕೆನಾಲ್ ಜಿಲ್ಲೆಯ ಜನರ ಪಾಲಿಗೆ ಮರಣಶಾಸನ ರದ್ದುಗೊಳಿಸದಿದ್ದರೆ ಉಗ್ರ ಹೋರಾಟ: ಸೊಗಡು ಶಿವಣ್ಣ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಜನರ ಪಾಲಿಗೆ ಮರಣಶಾಸನವಾಗಿರುವ ಅವೈಜ್ಞಾನಿಕ, ವಿವಾದಿತ ಹೇಮಾವತಿ ಎಕ್ಸ್‌ಪ್ರೆಸ್ ಪೈಪ್‌ಲೈನ್ ಲಿಂಕ್ ಕೆನಾಲ್ ಯೋಜನೆಯನ್ನು ರದ್ದುಗೊಳಿಸಬೇಕು, ಇಲ್ಲವಾದರೆ ಉಗ್ರ ಹೋರಾಟ ಮಾಡುವುದಾಗಿ ಮಾಜಿ ಸಚಿವ ಸೊಗಡು ಶಿವಣ್ಣ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಸ್ಥಗಿತಗೊಳಿಸಬೇಕು ಎಂದು ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗೆ ಇಂದೇ ಮನವಿ ಪತ್ರ ನೀಡುತ್ತೇನೆ, ಜಿಲ್ಲೆಯ ಪಾಲಿನ ಹೇಮಾವತಿ ನೀರನ್ನು ಪೈಪ್ ಲೈನ್ ಮೂಲಕ ಮಾಗಡಿ, ರಾಮನಗರಕ್ಕೆ ತೆಗೆದುಕೊಂಡುಹೋಗಲು ಬಿಡುವುದಿಲ್ಲ ಎಂದು ಹೇಳಿದರು.

ಹೇಮಾವತಿ ಜಲಾಶಯ ಯೋಜನೆಯು ಪರಿಪೂರ್ಣ ನೀರಾವರಿ ಯೋಜನೆಯಾಗಿದ್ದು, ಇದರಡಿ ಬರುವ ತುಮಕೂರು ಶಾಖಾ ನಾಲೆಯ ಉದ್ದ 228 ಕಿ.ಮೀ ಇದ್ದು, 2 ಲಕ್ಷ 37 ಸಾವಿರ ಎಕರೆ ವಿಸ್ತೀರ್ಣದ ಅಚ್ಚುಕಟ್ಟು ಪ್ರದೇಶ ಹೊಂದಿರುತ್ತದೆ. ಆದರೆ ಇದುವರೆಗೂ ಈ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಹರಿಸಿರುವುದಿಲ್ಲ. ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವ ಸೃಷ್ಟಿಯಾದ್ದರಿಂದ ಜಿಲ್ಲೆಗೆ ನಿಗಧಿಯಾಗಿದ್ದ 18.38 ಟಿ.ಎಂ.ಸಿ. ನೀರಿನಲ್ಲಿ 12.38 ಟಿ.ಎಂ.ಸಿ. ನೀರನ್ನು ಅಚ್ಚುಕಟ್ಟು ಪ್ರದೇಶಕ್ಕೂ ಹಾಗೂ 6 ಟಿ.ಎಂ.ಸಿ. ನೀರನ್ನು ಕುಡಿಯುವ ನೀರಿನ ಯೋಜನೆಗಳಿಗೂ ಹಂಚಿಕೆಯನ್ನು ಈಗಾಗಲೇ ಮಾಡಲಾಗಿದೆ. ಎಕ್ಸ್‌ಪ್ರೆಸ್ ಪೈಪ್‌ಲೈನ್ ಲಿಂಕ್ ಕೆನಾಲ್ ಯೋಜನೆ ಕಾರ್ಯಗತಗೊಂಡರೆ ತುಮಕೂರು ಜಿಲ್ಲೆಯ ತಾಲ್ಲೂಕುವಾರು ಹಳ್ಳಿಗಳಿಗೆ ಸಮರ್ಪಕವಾಗಿ ಮತ್ತು ಸಮಾನಾಂತರವಾಗಿ ರಾಷ್ಟ್ರೀಯ ಜಲ ಕಾರ್ಯನೀತಿಯ ಅನ್ವಯ ನೀರು ಹರಿಸಲು ಸಾಧ್ಯವಾಗುವುದಿಲ್ಲ ಎಂದರು.



ಎಕ್ಸ್‌ಪ್ರೆಸ್ ಪೈಪ್‌ಲೈನ್ ಲಿಂಕ್ ಕೆನಾಲ್ ಯೋಜನೆಯನ್ನು ಕಾರ್ಯಗತಗೊಳಿಸಿದರೆ ಟಿಬಿಸಿ ನಾಲೆಯ ಸರಪಳಿ 70 ಕಿ.ಮೀ.ನಿಂದ 166 ಕಿ.ಮೀ.ವರೆಗೆ ನಾಲೆಯಲ್ಲಿ ಹರಿಯುವ ನೀರಿನ ಎತ್ತರ ಮತ್ತು ವೇಗ ಕಡಿಮೆಯಾಗಿ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಹರಿಸುವ 23 ಉಪನಾಲೆಗಳು ಹಾಗೂ 23 ಕುಡಿಯುವ ನೀರಿನ ಯೋಜನೆಗಳ ನೀರು ನಿರ್ವಹಣಾ ವ್ಯವಸ್ಥೆ ವಿಸ್ಕೃತಗೊಳ್ಳುವುದು. ಏಷ್ಯಾದಲ್ಲೇ ಅತಿ ಹೆಚ್ಚು ವಿಸ್ತೀರ್ಣ ಹೊಂದಿರುವ ವಸಂತನರಸಾಪುರ ಕೈಗಾರಿಕ ಪ್ರದೇಶಕ್ಕೆ ಮತ್ತು ಹೆಚ್‌ಎಎಲ್ ಘಟಕಕ್ಕೂ ಸಹ ನೀರಿನ ಅಭಾವ ಸೃಷ್ಟಿಯಾಗುವುದು. ಪೈಪ್‌ಲೈನ್ ಲಿಂಕ್ ಕೆನಾಲ್ ಎನ್ನುವ ಅನಗತ್ಯ, ಅನವಶ್ಯಕ ಮತ್ತು ಅವೈಜ್ಞಾನಿಕ ಯೋಜನೆಗೆ ವಿನಿಯೋಗಿಸಲು ಹೊರಟಿರುವ ರೂ. 986 ಕೋಟಿಗಳ ಮೊತ್ತದ ಈ ಯೋಜನೆ ಬದಲಾಗಿ ಹೇಮಾವತಿ ಯೋಜನೆಯ ಕುಣಿಗಲ್ ತಾಲ್ಲೂಕಿನ ಟಿಬಿಸಿ ನಾಲೆಯ ಸರಪಳಿ 195 ಕಿ.ಮೀ ನಿಂದ 228 ಕಿ.ಮೀ.ವರೆಗೆ ಮುಖ್ಯ ನಾಲೆ ಉಪ ನಾಲೆಗಳು ವಿತರಣಾ ನಾಲೆಗಳು ಹಾಗೂ ಡಿಪಿಓಗಳ ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಕುಣಿಗಲ್ ತಾಲ್ಲೂಕಿನ ಸುಮಾರು 8000 ಹೆಕ್ಟೇರ್ ಅಚ್ಚುಕಟ್ಟಿಗೆ ನೀರು ಹರಿಸಬಹುದಾಗಿದೆ ಎಂದು ಸೊಗಡು ಶಿವಣ್ಣ ಹೇಳಿದರು.

ತಾಂತ್ರಿಕ ಪರಿಣಿತರ ತಂಡದಿಂದ ಸ್ಥಳ ಪರಿಶೀಲನೆ ನಡೆಸಿ ಆಧುನೀಕರಣಗೊಂಡಿರುವ ಟಿಬಿಸಿ ನಾಲೆಯ ಮುಖೇನವೇ ಕುಣಿಗಲ್ ತಾಲ್ಲೂಕಿಗೆ ನಿಗಧಿಯಾಗಿರುವ 3 ಟಿಎಂಸಿ ನೀರನ್ನು ಹರಿಸುವ ಸಾಧ್ಯತೆ ಮತ್ತು ಅಸಾಧ್ಯತೆಗಳ ಬಗ್ಗೆ ಸಂಪೂರ್ಣವಾಗಿ ಅಧ್ಯಯನ ನಡೆಸಿ ವಿವರವಾದ ಮಾಹಿತಿ ಪಡೆಯುವವರೆಗೂ ಪೈಪ್‌ಲೈನ್ ಲಿಂಕ್ ಕೆನಾಲ್ ಯೋಜನೆಯನ್ನು ಯಾವುದೇ ಕಾರಣಕ್ಕೂ ಮುಂದುವರೆಸಬಾರದು ಎಂದು ಒತ್ತಾಯಿಸಿದರು.

ನಗರಪಾಲಿಕೆ ಮಾಜಿ ಸದಸ್ಯ ಕೆ.ಪಿ. ಮಹೇಶ, ನಗರಸಭಾ ಮಾಜಿ ಸದಸ್ಯ ಟಿ.ಸಿ.ಶಶಿಧರ್, ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾಕುಮಾರ್, ಕರ್ನಾಟಕ ರಕ್ಷಣಾ ಸೇನೆ ಜಿಲ್ಲಾಧ್ಯಕ್ಷ ಅರುಣ್ ಕೃಷ್ಣಯ್ಯ, ವೀರಶೈವ ಬ್ಯಾಂಕ್ ಅಧ್ಯಕ್ಷ ಕೆ.ಜೆ.ರುದ್ರಪ್ಪ, ಉಪಾಧ್ಯಕ್ಷ, ವಕೀಲ ಹೆಬ್ಬಾಕ ಮಲ್ಲಿಕಾರ್ಜುನಯ್ಯ, ಮುಖಂಡರಾದ ಎನ್.ಆರ್. ಶ್ರೀಕಾಂತ್, ಕೆ.ಹರೀಶ್, ಡಿ.ಆರ್.ಸಂದೀಪ್, ಆಟೋ ನವೀನ್, ಎನ್.ಗಣೇಶ್, ಮದನ್ ಸಿಂಗ್, ರಫೀಕ್ ಅಹಮ್ಮದ್, ಹನುಮಂತರಾಯಪ್ಪ, ಮೊಬೈಲ್ ದೇವರಾಜು, ಡಿ.ಕೆ. ಇಂದ್ರಕುಮಾರ್, ರವಿಕುಮಾರ್ ಹಾಜರಿದ್ದರು.

ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ರವರಿಗೆ ಮತ ಭಾಂದವರಿಂದ ಬೃಹತ್ ಅಭಿನಂದನಾ ಸಮಾರಂಭ

ಸೂರ್ಯಪ್ರಗತಿನ್ಯೂಸ್.ಕಾಂ

ಕೊರಟಗೆರೆ– ಕರ್ನಾಟಕ ಸರ್ಕಾರದದಲ್ಲಿ ಎರಡನೇ ಬಾರಿಗೆ ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ರವರಿಗೆ ಕೊರಟಗೆರೆ ಕ್ಷೇತ್ರದ ಸಮಸ್ತ ಮತ ಭಾಂದವರಿಂದ ಬೃಹತ್ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೊಡ್ಲಹಳ್ಳಿ ಅಶ್ವಥನಾರಾಯಣ ತಿಳಿಸಿದರು.

ಅವರು ಪಟ್ಟಣದ ರಾಜೀವಭವನದಲ್ಲಿ ಕೊರಟಗೆರೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಅಭಿಮಾನಿಗಳಿಂದ ನಡೆದ ಪತ್ರಿಕಾಗೋಷ್ಟಿಯನ್ನು ಉದ್ದೇಶಿಸಿ ಮಾತನಾಡಿ ಜೂನ್ 14 ರ ಭಾನುವಾರದಂದು ಬೆಳ್ಳಿಗೆ 10 ಗಂಟೆಗೆ ಕೊರಟಗೆರೆ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಕ್ಷೇತ್ರ ಶಾಸಕರಾದ ಡಾ.ಜಿ.ಪರಮೇಶ್ವರರವರು ಎರಡೇ ಬಾರಿಗೆ ಉಪಮುಖ್ಯಮಂತ್ರಿಗಳಾಗಿ ರಾಜ್ಯದ ಅಧಿಕಾರ ವಹಿಸಿಕೊಂಡ ಹಿನ್ನಲೆಯಲ್ಲಿ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಎಲ್ಲಾ ಪದಾಧಿಕಾರಿಗಳು ವಿವಿಧ ಘಟಕಗಳಿಂದ, ತಾಲ್ಲೂಕಿನ ವಿವಿಧ ಸಂಘಟನೆಗಳಿಂದ, ಅಭಿಮಾನಿಗಳಿಂದ ಮತ್ತು ಮತದಾರರಿಂದ ಬೃಹತ್ ಅಭಿನಂದನಾ ಸಮಾರಂಭವನ್ನು ಏರ್ಪಡಿಸಿದ್ದು ಎಲ್ಲಾ ಮತಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಕೋರಿದರು.

ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅರಕೆರೆ ಶಂಕರ್ ಮಾತನಾಡಿ ಭಾನುವಾರದಂದು ಬೆಳ್ಳಿಗೆ ನಮ್ಮ ಕ್ಷೇತ್ರದ ಹೆಮ್ಮೆಯ ಉಪಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ರವರನ್ನು ಸಮಾರಂಭಕ್ಕೆ ಮುಂಚಿತವಾಗಿ ಹೋವಿನ ರಥದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಟಾಂಡ್‌ನಿಂದ ಪದವಿ ಪೂರ್ವ ಕಾಲೇಜು ಮೈದಾನದವರೆಗೆ ವಿವಿಧ ಜಾನಪದ ತಂಡಗಳು, ಕುಂಭ ಕಳಶಗಳು, ಸಿಡಿ ಮದ್ದಿಗಳಿಂದ ಸಾವಿರಾರು ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಮತದಾರರಿಂದ ಬೃಹತ್ ಮೆರವಣಿಗೆಯನ್ನು ನಡೆಸಲಾಗುವುದು ಎಂದರು.




ಕೆ.ಪಿ.ಸಿ.ಸಿ ಸದಸ್ಯ ಎ.ಡಿ.ಬಲರಾಮಯ್ಯ ಮಾತನಾಡಿ ಡಾ.ಜಿ.ಪರಮೇಶ್ವರ ರವರು ಕೊರಟಗೆರೆ ಕ್ಷೇತಕ್ಕೆ ಬಂದು ಶಾಸಕರಾದ ಮೇಲೆ 8 ವರ್ಷಗಳ ಅವಧಿ ಕೆ.ಪಿ.ಸಿ.ಸಿ ಅಧ್ಯಕ್ಷರು, ಎರಡು ಭಾರಿ ಉಪಮುಖ್ಯಮಂತ್ರಿಗಳು, 3 ಭಾರಿ ಗೃಹ ಸಚಿವರು ಹಾಗಿದ್ದು ಅದಕ್ಕಾಗಿ ಕೊರಟಗೆರೆ ಮತಬಾಂಧವರು ಅಭಿನಂದನಾ ಸಮಾರಂಭ ಹಮ್ಮಿಕೊಂಡಿದ್ದಾರೆ ಆದರೆ ಅವರು ಮುಖ್ಯಮಂತ್ರಿ ಗಳಾದ ಕೊರಗು ಕೊರಟಗೆರೆ ಕ್ಷೇತ್ರ ಸೇರಿದಂತೆ ರಾಜ್ಯದ ವಿವಿಧ ಅಭಿಮನಿಗಳಲ್ಲಿ ಇದೆ ಎಂದರು.

ಮುಖಂಡರಾದ ಮಹಾಲಿಂಗಪ್ಪ ಮಾತನಾಡಿ ಭಾನುವಾರ ಸಮಾರಂಭಕ್ಕೆ ಬರುವ ಸಮಸ್ತ ಮತಬಾಂಧವರಿಗೆ ಉಪಹಾರದ ವ್ಯವಸ್ಥೆಯನ್ನು ಸಹ ಮಾಡಲಾಗಿದ್ದು, ಕಾರ್ಯಕ್ರಮಕ್ಕೆ ಬೃಹತ್ ವೇದಿಕೆಯನ್ನು ನಿರ್ಮಿಸಲಾಗಿದೆ, ಎರಡನೇ ಬಾರಿಗೆ ಉಪಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ರವರನ್ನು ಕೊರಟಗೆರೆಗೆ ಅದ್ದೂರಿಯಾಗಿ ಬರಮಾಡಿಕೊಳ್ಳಲಾಗುವುದು ನಮ್ಮ ಕ್ಷೇತ್ರದ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಕೋರಿದರು.

ಗೋಷ್ಠಿಯಲ್ಲಿ ಮಹಿಳಾ ಅಧ್ಯಕ್ಷೆ ಜಯಮ್ಮ, ಮುಖಂಡರುಗಳಾದ ವೆಂಕಟೇಶ್‌ಮೂರ್ತಿ, ಎಲ್.ರಾಜಣ್ಣ, ರುದ್ರಪ್ರಸಾದ್, ನರಸಮ್ಮ ನರಸಿಂಹಮೂರ್ತಿ, ಸೈಯದ್‌ಸೈಪುಲ್ಲಾ, ಟಿ.ಸಿ.ರಾಮಣ್ಣ, ಜಯರಾಮ್, ವಿನಯ್‌ಕುಮಾರ್, ಗಟ್ಲಹಳಿಕುಮಾರ್, ಮಕ್ತಿಯಾರ್, ಅರವಿಂದ್, ಲಕ್ಷಮ್ಮ, ಮಲ್ಲಣ್ಣ, ಹನುಮಂತರಾಜು, ಬೈರೇಶ್, ದೀಪಕ್, ರಘುವೀರ್, ಸೂಪಿಯಾನ್, ದೇವರಾಜು,(ಸಕ್ಕರೆ), ಸೋಮೇಶ್, ಭರತ್, ರವಿ, ರಮೇಶ್, ಸೇರಿದಂತೆ ಇತರರು ಹಾಜರಿದ್ದರು.

ಚಿತ್ರ– ಡಾ.ಜಿ.ಪರಮೇಶ್ವರ ರವರ ಅಭಿನಂದನಾ ಸಮಾರಂಭದ ಪತ್ರಿಕಾಗೋಷ್ಟಿಯಲ್ಲಿ ಕಾಂಗ್ರೆಸ್ ಮುಖಂಡರು ಮತ್ತು

ದೆಹಲಿಯಲ್ಲಿ ಡಿಕೆ ಶಿವಕುಮಾರ್ ಅಮಿತ್ ಶಾ ಭೇಟಿಯಾಗಿ ಕರ್ನಾಟಕದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮನವಿ



ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮೂರು ದಿನದ ನವದೆಹಲಿ ಪ್ರವಾಸ ಮುಗಿಸಿ ಇದೀಗ ಬೆಂಗಳೂರಿನತ್ತ ಮುಖ ಮಾಡಿದ್ದಾರೆ. ನೀತಿ ಆಯೋಗದ ಸಭೆ ಸಂಬಂಧ ದೆಹಲಿಗೆ ತೆರಳಿದ್ದ ಡಿಕೆಶಿ, ಪ್ರಧಾನಿ ನರೇಂದ್ರ ಮೋದಿಯಾಗಿ ಕೇಂದ್ರ ಸಚಿವರನ್ನು ಭೇಟಿ ಮಾಡಿ ಕರ್ನಾಟಕದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮನವಿ ಮಾಡಿದ್ದಾರೆ.

ಡಿಕೆ ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುತ್ತಿದ್ದಂತೆಯೇ ದೆಹಲಿಯಲ್ಲಿ ನಡೆದ ನೀತಿ ಆಯೋಗದ ಸಭೆಯಲ್ಲಿ ಭಾಗವಹಿಸಿದ್ದು, ತಮ್ಮ ಮೊದಲ ಸಭೆಯಲ್ಲಿ ಕೆಲ ವಿಚಾರಗಳ ಬಗ್ಗೆ ಚರ್ಚಿಸಿದ್ದಾರೆ. ಅಲ್ಲದೇ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಹ ಭೇಟಿ ಮಾಡಿ ಕರ್ನಾಟಕದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮನವಿ ಮಾಡಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನೂ ಸಹ ಭೇಟಿ ಮಾಡಿದ್ದು, ಪೊಲೀಸ್ ಸಾಮರ್ಥ್ಯ ಸುಧಾರಣೆಗೆ ನೆರವಾಗಲು ಮನವಿ ಮಾಡಿದ್ದಾರೆ. ಅಲ್ಲದೇ ಈ ವೇಳೆ ಒಂಭತ್ತು ಬೇಡಿಕೆಗಳ ಮನವಿಯನ್ನೂ ಸಲ್ಲಿಕೆ ಮಾಡಿದ್ದಾರೆ.

ಕಾರಾಗೃಹಗಳ (ಜೈಲುಗಳ) ಆಧುನೀಕರಣ: ಕಾರಾಗೃಹಗಳ ಆಧುನೀಕರಣ ಯೋಜನೆಯಡಿ 2025–26 ರ ಆರ್ಥಿಕ ವರ್ಷಕ್ಕೆ (ಸಿಸಿಟಿವಿ, ವಾಕಿ–ಟಾಕಿ ಮತ್ತು ಇತರ ಭದ್ರತಾ ಉಪಕರಣಗಳ ಖರೀದಿಗೆ) 20 ಕೋಟಿ ರೂ. ಗಳನ್ನು ಬಿಡುಗಡೆ ಮಾಡುವಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಮೊತ್ತವನ್ನು ಶೀಘ್ರ ಮಂಜೂರು ಮಾಡಬೇಕು.

ಕೇಂದ್ರ ಮೋಟಾರು ವಾಹನಗಳ ನಿಯಮಗಳು, 1989 ರ ನಿಯಮ 52–ಂ ಅನುಷ್ಠಾನದ ಗಡುವು ವಿಸ್ತರಣೆ: ಕರ್ನಾಟಕದಲ್ಲಿ ನಿಯಮ 52–ಂ ಅನ್ನು ಅನುಷ್ಠಾನಗೊಳಿಸಲು ಗಡುವನ್ನು ವಿಸ್ತರಿಸುವಂತೆ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಕ್ಕೆ ಪತ್ರ ಬರೆಯಲಾಗಿದೆ. ದಯವಿಟ್ಟು ತಾವು ಈ ವಿಷಯವನ್ನು ಸಂಬಂಧಪಟ್ಟ ಸಚಿವಾಲಯದೊಂದಿಗೆ ಚರ್ಚಿಸಿ, ಆದಷ್ಟು ಬೇಗ ಅನುಮೋದನೆ ಕೊಡಿಸಬೇಕು.

ಪೊಲೀಸ್ ಠಾಣೆಗಳಲ್ಲಿ ಸಿಸಿಟಿವಿ (ಅಅಖಿಗಿ) ಕ್ಯಾಮೆರಾಗಳ ಮೇಲ್ದರ್ಜೀಕರಣ: ಗೌರವಾನ್ವಿತ ಭಾರತದ ಸುಪ್ರೀಂ ಕೋರ್ಟ್ ಮುಂದೆ ನಡೆದ ಚರ್ಚೆಗಳ ಅನುಸಾರ, ಪೊಲೀಸ್ ಠಾಣೆಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳನ್ನು ಮೇಲ್ದರ್ಜೆಗೆ ಏರಿಸಲು ೦ಖಗಿಂಕ ಅಡಿಯಲ್ಲಿ 278.26 ಕೋಟಿ ರೂ.ಗಳ ಪ್ರಸ್ತಾವನೆ ಸಲ್ಲಿಸಲಾಗಿದೆ. ಇದಕ್ಕೆ ಸಕಾರಾತ್ಮಕವಾಗಿ ಪರಿಗಣಿಸಬೇಕು.

SLV ಮಹಿಳಾ ಮಾರ್ಟ್ ಭಾರೀ ವಂಚನೆ: ಮಹಿಳೆಯರಿಗೆ ಲಕ್ಷ ಲಕ್ಷ ವಂಚನೆ

ಗೃಹ ಉದ್ಯೋಗದ ನೆಪದಲ್ಲಿ ನೂರಾರು ಮಹಿಳೆಯರಿಗೆ 5 ಲಕ್ಷದಿಂದ ಕೋಟಿ ರೂ.ವರೆಗೂ ವಂಚನೆ



ಹಾವೇರಿ ಬಳಿಕ ತುಮಕೂರಿನಲ್ಲೂ SLV ಮಹಿಳಾ ಮಾರ್ಟ್ ಭಾರೀ ವಂಚನೆ: ಮಹಿಳೆಯರಿಗೆ ಲಕ್ಷ ಲಕ್ಷ ವಂಚನೆ

ಹಾವೇರಿ ಬೆನ್ನಲ್ಲೇ ತುಮಕೂರಿನ ಜಯನಗರದಲ್ಲೂ 'ಎಸ್‌ಎಲ್‌ವಿ ಮಹಿಳಾ ಮಾರ್ಟ್' ಗೃಹ ಉದ್ಯೋಗದ ನೆಪದಲ್ಲಿ ನೂರಾರು ಮಹಿಳೆಯರಿಗೆ 5 ಲಕ್ಷದಿಂದ ಕೋಟಿ ರೂ.ವರೆಗೂ ವಂಚಿಸಿದೆ. ಮನೆಯ ಪತ್ರ ಅಡವಿಟ್ಟು ಹಣ ಹೂಡಿದ್ದ ಮಹಿಳೆಯರು ಈಗ ಬೀದಿಗೆ ಬಿದ್ದಿದ್ದು, ಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಹಾವೇರಿಯಲ್ಲಿ ಸ್ವಯಂ ಉದ್ಯೋಗದ ಹೆಸರಿನಲ್ಲಿ ಮಹಿಳೆಯರಿಗೆ ಕೋಟ್ಯಂತರ ರೂಪಾಯಿ ವಂಚಿಸಿ ಸದ್ದು ಮಾಡಿದ್ದ 'ಎಸ್‌ಎಲ್‌ವಿ ಮಹಿಳಾ ಮಾರ್ಟ್' ಕಂಪನಿಯ ವಂಚನಾ ಜಾಲ ರಾಜ್ಯದಾದ್ಯಂತ ವಿಸ್ತರಿಸಿದೆ ಎನ್ನಲಾಗಿತ್ತು. ಇದೀಗ ತುಮಕೂರು ಜಿಲ್ಲೆಯಲ್ಲಿಯೂ ಮಹಾ ಮೋಸ ನಡೆದಿರುವುದು ಗೊತ್ತಾಗಿದೆ. ತುಮಕೂರು ನಗರದ ಜಯನಗರದಲ್ಲಿ ಶಾಖೆ ತೆರೆದಿದ್ದ ಈ ಸಂಸ್ಥೆಯು, ಗೃಹಿಣಿಯರು ಹಾಗೂ ವಿದ್ಯಾವಂತ ಮಹಿಳೆಯರಿಗೆ ಸ್ವಯಂ ಉದ್ಯೋಗದ ಆಮಿಷ ಒಡ್ಡಿ 5 ಲಕ್ಷ ರೂಪಾಯಿಯಿಂದ ಹಿಡಿದು ಕೋಟಿಗಟ್ಟಲೆ ಹಣ ಹೂಡಿಕೆ ಮಾಡಿಸಿಕೊಂಡು ರಾತ್ರೋರಾತ್ರಿ ವಂಚಿಸಿ ಕೈಕೊಟ್ಟಿದೆ. ಹಾವೇರಿ ಮಾದರಿಯಲ್ಲೇ ಇಲ್ಲೂ ನೂರಾರು ಮಹಿಳೆಯರು ಹಣ ಕಳೆದುಕೊಂಡು ಬೀದಿಗೆ ಬಿದ್ದಿದ್ದು, ಕಣ್ಣೀರು ಹಾಕುತ್ತಿದ್ದಾರೆ.

ಹಣ ಡಬಲ್ ಆಗುವ ಆಸೆಗೆ ಬಿದ್ದ ಮಹಿಳೆಯರು

ಈ ಕಂಪನಿಯು ಮನೆಯಲ್ಲಿಯೇ ಇರುವ ಗೃಹಿಣಿಯರನ್ನು ಗುರಿಯಾಗಿಸಿಕೊಂಡು ವ್ಯವಸ್ಥಿತವಾಗಿ ವಂಚನಾ ಜಾಲ ಹೆಣೆದಿತ್ತು. ಕಂಪನಿಯ ನಿಯಮದ ಪ್ರಕಾರ, ಮಹಿಳೆಯರು ಆರಂಭದಲ್ಲಿ ಮುಂಗಡವಾಗಿ ಲಕ್ಷ ಲಕ್ಷ ಹಣವನ್ನು ಡೆಪಾಸಿಟ್ ಮಾಡಬೇಕಿತ್ತು. ಈ ಡೆಪಾಸಿಟ್ ಮೊತ್ತಕ್ಕೆ ಅನುಗುಣವಾಗಿ ಕಂಪನಿಯು ಮನೆಯಲ್ಲೇ ಪ್ಯಾಕಿಂಗ್ ಮಾಡಲು ಅಗರಬತ್ತಿ, ಕಸದ ಪೊರಕೆ ಹಾಗೂ ಮೇಣದಬತ್ತಿ ಸೇರಿದಂತೆ ವಿವಿಧ ವಸ್ತುಗಳನ್ನು ನೀಡುತ್ತಿತ್ತು. ಮಹಿಳೆಯರು ಇವುಗಳನ್ನು ಪ್ಯಾಕ್ ಮಾಡಿ ಕಂಪನಿಗೆ ವಾಪಸ್ ನೀಡಬೇಕಿತ್ತು. ಪ್ರತಿ ತಿಂಗಳು ಹೂಡಿಕೆ ಮಾಡಿದ ಹಣಕ್ಕೆ ತಕ್ಕಂತೆ ಇಂತಿಷ್ಟು ಸಾವಿರ ರೂಪಾಯಿ ಸಂಬಳ ಹಾಗೂ ಕಂತುಗಳಲ್ಲಿ ಡೆಪಾಸಿಟ್ ಹಣವನ್ನು ವಾಪಸ್ ನೀಡುವುದಾಗಿ ಕಂಪನಿ ನಂಬಿಸಿತ್ತು. ಅಲ್ಲದೆ, ಕಂತುಗಳು ಮುಗಿದ ತಕ್ಷಣ ಪೂರ್ಣ ಡೆಪಾಸಿಟ್ ಹಣ ವಾಪಸ್ ಸಿಗಲಿದೆ, ಇದರಿಂದ ಹೂಡಿಕೆ ಮಾಡಿದ ಹಣ ಕೆಲವೇ ತಿಂಗಳುಗಳಲ್ಲಿ ದುಪ್ಪಟ್ಟಾಗಲಿದೆ ಎಂದು ನಂಬಿಸಲಾಗಿತ್ತು.

ಏಪ್ರಿಲ್ ವರೆಗೆ ಹಣ ವಸೂಲಿ ಮಾಡಿ ಬಾಗಿಲು ಹಾಕಿದ ಕಂಪನಿ

ಕಳೆದ ಒಂದು ವರ್ಷದಿಂದ ತುಮಕೂರಿನಲ್ಲಿ ಈ ಕಂಪನಿ ಸದ್ದಿಲ್ಲದೆ ವ್ಯವಹಾರ ನಡೆಸುತ್ತಿತ್ತು. ಇತ್ತೀಚಿನ ಏಪ್ರಿಲ್ ತಿಂಗಳವರೆಗೂ ಮಹಿಳೆಯರಿಂದ ಲಕ್ಷ ಲಕ್ಷ ರೂಪಾಯಿ ಹಣವನ್ನು ಠೇವಣಿ ರೂಪದಲ್ಲಿ ಪಡೆದುಕೊಂಡಿದ್ದ ಕಂಪನಿ, ತದನಂತರ ದಿಢೀರನೆ ತನ್ನ ವಹಿವಾಟನ್ನು ಸ್ಥಗಿತಗೊಳಿಸಿ ಕಚೇರಿಗೆ ಬಾಗಿಲು ಹಾಕಿದೆ. ಮೋಸ ಹೋಗಿರುವುದು ಗೊತ್ತಾಗಿ ಮಹಿಳೆಯರು ಹಲವು ಬಾರಿ ಕಚೇರಿಗೆ ಅಲೆದರೂ ಯಾವುದೇ ಪ್ರಯೋಜನವಾಗಿಲ್ಲ. ತೀವ್ರ ಆರ್ಥಿಕ ನಷ್ಟ ಉಂಟಾಗಿದ್ದರೂ, ಮರ್ಯಾದೆಗೆ ಅಂಜಿ ಆರಂಭದಲ್ಲಿ ದೂರು ನೀಡಲು ಮಹಿಳೆಯರು ಮೀನಾಮೇಷ ಎಣಿಸುತ್ತಿದ್ದರು. ಆದರೆ ಹಾವೇರಿ ವಂಚನೆ ಪ್ರಕರಣ ಬಯಲಿಗೆ ಬರುತ್ತಿದ್ದಂತೆ ಧೈರ್ಯ ತಂದಿಕೊಂಡ ಕೆಲವು ಸಂತ್ರಸ್ತರು ಜಯನಗರ ಪೊಲೀಸ್ ಠಾಣೆಯ ಮೆಟ್ಟಿಲೇರಿದ್ದಾರೆ.

ಒಬ್ಬೊಬ್ಬರದು ಒಂದೊಂದು ಕಣ್ಣೀರಿನ ಕಥೆ

ಹಣ ಕಳೆದುಕೊಂಡ ಮಹಿಳೆಯರ ಕಹಾನಿ ಬೆಚ್ಚಿಬೀಳಿಸುವಂತಿದೆ. ಕುಟುಂಬದವರಿಗೆ ತಿಳಿಸದೆ ರಹಸ್ಯವಾಗಿ ಹಣ ಹೂಡಿಕೆ ಮಾಡಿದ್ದ ಹಲವು ಗೃಹಿಣಿಯರು, ತಮ್ಮ ಪತಿಗೆ ಗೊತ್ತಾಗದಂತೆ ಮನೆಯ ಅಸಲಿ ಆಸ್ತಿ ಪತ್ರಗಳನ್ನು ಬ್ಯಾಂಕ್‌ನಲ್ಲಿ ಅಡಮಾನವಿಟ್ಟು ಲೋನ್ ಪಡೆದು ಕಂಪನಿಗೆ ತಂದುಕೊಟ್ಟಿದ್ದಾರೆ! ಇನ್ನು ಕೆಲವರು ತಾವಷ್ಟೇ ಅಲ್ಲದೆ ತಮ್ಮ ಆಪ್ತ ಸ್ನೇಹಿತೆಯರು ಹಾಗೂ ಸಂಬಂಧಿಕರಿಂದಲೂ ಲಕ್ಷ ಲಕ್ಷ ರೂಪಾಯಿ ಸಾಲ ಕೊಡಿಸಿ ಹೂಡಿಕೆ ಮಾಡಿಸಿದ್ದರು. ಸದ್ಯ ವಂಚನೆಗೊಳಗಾದ ಮಹಿಳೆಯರು ಮುಖ ಮುಚ್ಚಿಕೊಂಡು ಕಚೇರಿಯ ಮುಂದೆ ಅಸಹಾಯಕರಾಗಿ ನಿಂತಿದ್ದಾರೆ. ಸದ್ಯ ಜಯನಗರ ಪೊಲೀಸರು ಈ ಕುರಿತು ಎನ್‌ಸಿಆರ್) ದಾಖಲಿಸಿಕೊಂಡಿದ್ದು, ಕಂಪನಿಯ ಹಿನ್ನೆಲೆ ಹಾಗೂ ವಂಚನೆಗೊಳಗಾದ ಮಹಿಳೆಯರ ಸಂಪೂರ್ಣ ಮಾಹಿತಿಯನ್ನು ಕಲೆಹಾಕಿ ತನಿಖೆ ಚುರುಕುಗೊಳಿಸಿದ್ದಾರೆ.

ವಿಶೇಷ ಚೇತನ ಮಕ್ಕಳ ಪೋಷಣೆ ಮಾಡುವ ಪೋಷಕರ ಕುಟುಂಬಕ್ಕೆ ಅಗತ್ಯ ನೆರವು



ಚಿಕ್ಕನಾಯಕನಹಳ್ಳಿ:-ಬುದ್ದಿಮಾಂದ್ಯ ಸೇರಿದಂತೆ ವಿಶೇಷ ಚೇತನ ಮಕ್ಕಳನ್ನು ನೋಡಿಕೊಳ್ಳುವಂತಹ ಪೋಷಕರ ಕುಟುಂಬಗಳ ಅಭಿವೃದ್ದಿ ಅದ್ಯತೆ ನೀಡಲಾಗುವುದು ಇಂತಹ ಕುಟುಂಬಗಳಿಗೆ ಸರ್ಕಾರ ಹೆಚ್ಚಿನ ನೆರವು ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ಸ್ತ್ರೀಶಕ್ತಿ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಮೊಬಿಲಿಟಿ ಇಂಡಿಯಾ ಸಂಸ್ಥೆಯವತಿಯಿಂದ ಏರ್ಪಡಿಸಲಾಗಿದ್ದ ಅರೈಕೆದಾರರಿಗೆ ಮಕ್ಕಳ ದೈನಂದಿನ ಚಟುವಟಿಕೆಗಳ ನಿರ್ವಹಣೆ ಕುರಿತು ಕಾರ್ಯಗಾರ ಹಾಗೂ ನಿರಾಮಯ ಆರೋಗ್ಯ ವಿಮೆ ಕಾರ್ಡ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು :-ಬುದ್ದಿಮಾಂದ್ಯ ಸೇರಿದಂತೆ ವಿಶೇಷ ಚೇತನ ಮಕ್ಕಳನ್ನು ನೋಡಿಕೊಳ್ಳುವಂತಹ ಪೋಷಕರ ಕಾರ್ಯ ಭಗವಂತನೇ ಮೆಚ್ಚುವಂತದ್ದು ಸದಾ ಕಾಲ ಅವರ ಜೊತೆಯಲ್ಲೆ ಇದ್ದು ಅವರನ್ನು ನೋಡಿಕೊಳ್ಳುವುದು ಸಲಭದ ಮಾತಲ್ಲ ಇಂತಹ ಕುಟುಂಬಗಳಿಗೆ ಅಗತ್ಯವಾದ ನೆರವನ್ನು ನಾನು ಮೊದಲ ಅದ್ಯತೆ ನೀಡಿ ಸಹಕಾರ ನೀಡುತ್ತೇನೆ ಎಂದ ಅವರು ಕಳೆದ ಮೂರು ವರ್ಷಗಳಿಂದ ಈ ಮೊಬಿಲಿಟಿ ಇಂಡಿಯಾ ಸಂಸ್ಥೆಯವರು ಮಾಡುತ್ತಿರುವ ಸೇವೆ ಶ್ಲಾಘನೀಯವಾಗಿದೆ ಇಂದು ನೀಡುತ್ತಿರುವಂತಹ ನಿರಾಮಯ ಕಾರ್ಡ್ನ್ನ ಬಳಸಿಕೊಳ್ಳಿ ಎಂದ ಅವರು ಪೋಷಕರಿಗೆ ಪ್ರತಿಮಾಹೆ ಸರ್ಕಾರ ಒಂದು ಸಾವಿರ ಸಹಾಯಧನ ನೀಡುವುದನ್ನು ಹೆಚ್ಚು ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಮೊಬಿಲಿಟಿ ಇಂಡಿಯಾ ಸಂಸ್ಥೆಯ ಸಂಸ್ಥಾಪಕ ಆನಂದ್ ಮಾತನಾಡಿ ಈ ನಿರಾಮಯ ಕಾರ್ಡ್ ಒಂದು ಲಕ್ಷದ ವಿಮೆಯಾಗಿದ್ದು ಇದರಿಂದ ಮಕ್ಕಳಿಗೆ ಪ್ರತಿವರ್ಷಕ್ಕೆ ಒಂದು ಲಕ್ಷದವರೆಗೆ ಅಗತ್ಯವಾದ ಚಿಕಿತ್ಸೆ, ನೆರವು, ಔಷಧೋಪಚಾರಕ್ಕೆ ನೆರವು ಸಿಗಲಿದ್ದು ಇದನ್ನು ಪೋಷಕರು ಬಳಸಿಕೊಳ್ಳಬಹುದು ಎಂದ ಅವರು ಶಾಸಕರು ಈ ವಿಶೇಷ ಚೇತನ ಮಕ್ಕಳ ಮೇಲಿನ ಪ್ರೀತಿಯಿಂದ ಅವರಿಗಾಗಿ ಅಗತ್ಯ ನೆರವನ್ನು ನೀಡುವುದರೊಂದಿಗೆ ಕಾರ್ಯಕ್ರಮಗಳಿಗೆ ಉತ್ತೇಜನ ನೀಡುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ವಿಶೇಷ ಚೇತನ ಮಕ್ಕಳ ತಾಲ್ಲೂಕು ನೋಡೆಲ್ ಅಧಿಕಾರಿ ರೇಖಾ, ವಿವಿದೋದ್ದೇಶ ಪುರ್ನವಸತಿ ಕಾರ್ಯಕರ್ತ ರಮೇಶ್, ಮೊಬಿಲಿಟಿ ಇಂಡಿಯಾ ಸಂಸ್ಥೆಯ ಸುಧಾ, ಹಾಗೂ ಆಯುಷ್ ಇಲಾಖೆಯ ವೈದ್ಯರು ಹಾಜರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ನೂತನ ಅಧುನಿಕ ಅಗ್ನಿಶಾಮಕ ವಾಹನಕ್ಕೆ ಹಸಿರು ನಿಶಾನೆ ತೋರಿಸಿದ ಶಾಸಕ ಸಿ.ಬಿ.ಸುರೇಶ್‌ಬಾಬು



ಚಿಕ್ಕನಾಯಕನಹಳ್ಳಿ:-ತಾಲ್ಲೂಕಿನಲ್ಲಿ ಹೆಚ್ಚು ಬೇಸಿಗೆಯಲ್ಲಿ ಅಗ್ನಿದುರಂತಗಳು ಸೇರಿದಂತೆ ಅನೇಕ ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಅಗ್ನಿಶಾಮಕ ಕಾರ್ಯ ಶ್ಲಾಘನೀಯ ಇಂತಹ ಕೆಲಸಗಳಿಗೆ ಅನುಕೂಲವಾಗಲೆಂದು ನಮ್ಮ ತಾಲ್ಲೂಕಿನ ಅಗ್ನಿಶಾಮಕ ಠಾಣೆಗೆ ಇನ್ನೊಂದು ನೂತನ ವಾಹವನ್ನು ಸರ್ಕಾರದಿಂದ ಮಂಜೂರ ಮಾಡಿಸಲಾಗಿದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದಹಳೆಯೂರುಶ್ರೀಆಂಜನೇಯಸ್ವಾಮಿ ದೇವಾಲಯದ ಆವರಣದಲ್ಲಿ ನೂತನ ಅಗ್ನಿಶಾಮಕ ವಾಹನಕ್ಕೆ ಹಸಿರು ನೀಶಾನೆ ತೋರಿಸಿ ಮಾತನಾಡಿದ ಅವರು ನಮ್ಮ ತಾಲ್ಲೂಕು ವಿಶಾಲಾವಾಗಿದ್ದು ಹುಳಿಯಾರು ಹೋಬಳಿಯ ದಸೂಡಿಪಂಚಾಯಿತಿ ಭಾಗವು ಸುಮಾರು 30ಕಿ.ಮೀಕ್ಕೂ ಹೆಚ್ಚು ದೂರವಿದ್ದು ಈ ಪ್ರದೇಶಗಳಲ್ಲಿ ಅಗ್ನಿದುರಂತಗಳು ಸಂಬಂವಿಸಿದ ಸಂದರ್ಭದಲ್ಲಿ ಕೇವಲ ಒಂದೇ ಒಂದು ವಾಹನವಿದ್ದು ಇಲಾಖೆಯಲ್ಲಿ ಒಂದೇ ಸಮಯದಲ್ಲಿ ಎರಡು ಮೂರು ಕಡೆಗಳಲ್ಲಿ ಬೆಂಕಿಯ ಅವಘಡಗಳು ಸಂಬವಿಸಿದ ಸಂದರ್ಭದಲ್ಲಿ ತುಂಬಾ ತೊಂದರೆ ಅನುಭವಿಸಬೇಕಾಗಿತ್ತು ಇದನ್ನು ಅರಿತು ಸಂಬಂದ ಪಟ್ಟ ಇಲಾಖೆಯೊಂದಿಗೆ ಹಾಗೂ ಸರ್ಕಾರದೊಂದಿಗೆ ಚರ್ಚೆ ನಡೆಸಿ ಇನ್ನೊಂದು ವಾಹವನ್ನು ಮಂಜೂರು ಮಾಡಿಸಲಾಗಿದೆ ಇದನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಅಗ್ನಿಶಾಮಕ ಠಾಣಾಧಿಕಾರಿ ರಮೇಶ್ ಮಾತನಾಡಿ ಕೇಂದ್ರಸಕಾರದ ಅದೇಶದಂತೆ 15ವರ್ಷದ ಹಳೆಯವಾಹನಗಳಿಗೆ ಇರುವಂತಹ ಎಫ್‌ಸಿಯನ್ನು ರದ್ದುಪಡಿಸಿದ ಹಿನ್ನೇಲೆಯಲ್ಲಿ ನೂತನ ಅದುನಿಕ ಒಂದು ವಾಹನವನ್ನು ನೀಡಲಾಗಿತ್ತು ಅದರೆ ಇಲ್ಲಿ ಅಧಿಕ ಅಗ್ನಿ ದುರಂತಗಳು ನಡೆದ ಹಿನ್ನೇಲೆಯಲ್ಲಿ ಶಾಸಕರು ಸರ್ಕಾರದೊಡನೆ ಮಾತನಾಡಿ ಇನ್ನೊಂದು ವಾಹನವನ್ನು ತರಿಸಿದ್ದಾರೆ ಇದು ಕಳೆದ ಹಳೆಯವಾಹನಗಳು 4ಸಾವಿರ ಲೀಟರ್ ಸಾಮಾರ್ಥ್ಯಹೊಂದಿದ್ದು ಈಗಿನ ವಾಹನ 6ಸಾವಿರ ಲೀಟರ್ ಸಾಮಾರ್ಥ್ಯಹೊಂದಿದ್ದು ಇದರೊಂದಿಗೆ ಉತ್ತಮವಾದ ಪಂಪ್‌ವ್ಯವಸ್ಥೆ, ಉತ್ತಮ ಸಾಮಾರ್ಥ್ಯವನ್ನು ಹೊಂದಿದೆ ಇಂತಹವಾಹನ ಇಲ್ಲಿಗೆ ಬರಲು ಶಾಸಕರದ ಸಿ.ಬಿ.ಸುರೇಶ್‌ಬಾಬುರವರ ಕಾರ್ಯದಕ್ಷತೆ ಕಾರಣಾವಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಪುರಸಭಾದ್ಯಕ್ಷರಾದ ಸಿ.ಟಿ.ದಯಾನಂದ್, ಎಂ.ಎನ್.ಸುರೇಶ್ ಮಾಜಿ ಉಪಾದ್ಯಕ್ಷರುಗಳಾದ ಪುಟ್ಟಯ್ಯ, ರಾಜಶೇಖರ್,ಸೇರಿಂದ ಮುಖಂಡರುಗಳಾದ ಲವಕುಮಾರ್, ರೇಣುಕಸ್ವಾಮಿ ಹಾಗೂ ಅಗ್ನಿಶಾಮಕ ಇಲಾಖೆಯ ಲೀಡರ್‌ಗಳಾದ ವೈ,ನಾಗರಾಜು,ನವೀನ್‌ಕುಮಾರ್, ವೈಎಸ್, ಪ್ರಕಾಶ್ ಸಿ, ಚಂದ್ರುಗುಪ್ತ ಸೇರಿದಂತೆ ಪುರಸಭಾ ಮುಖ್ಯಾದಿಕಾರಿ ಮಂಜಮ್ಮ ಹಾಗೂ ಇತರರು ಇದ್ದರು.

13ರಂದು ನಗರಕ್ಕೆ ಸೋಮನಾಥ ಜ್ಯೋತಿರ್ಲಿಂಗ ಆಗಮನ 2 ದಿನ ವಿಶೇಷ ಪೂಜೆ, ಅಭಿಷೇಕ: ಸಾರ್ವಜನಿಕರಿಗೆ ದರ್ಶನ:

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಸಾವಿರಾರು ವರ್ಷಗಳಿಂದ ಕಣ್ಮರೆಯಾಗಿದೆಎಂದು ನಂಬಲಾದಗಿದ್ದ ಮೂಲ ಸೋಮನಾಥ ಜ್ಯೋತಿರ್ಲಿಂಗದ ಅಪರೂಪದ ಪವಿತ್ರ ಅವಶೇಷಗಳನ್ನು ತುಮಕೂರಿಗೆ ತರಲಾಗುತ್ತಿದ್ದು, ಭಕ್ತರಿಗೆ ಜ್ಯೋತಿರ್ಲಿಂಗದ ದರ್ಶನದ ಅವಕಾಶ ಮಾಡಲಾಗಿದೆ ಎಂದು ಆರ್ಟ್‌ಆಫ್ ಲಿವಿಂಗ್ ಜ್ಞಾನ ಕ್ಷೇತ್ರದ ರಾಜ್ಯ ಸಂಯೋಜಕ ಕೆ.ಎನ್. ನೀಲಕಂಠಯ್ಯ ಹೇಳಿದರು.

ನಗರದ ಜ್ಞಾನ ಕೇಂದ್ರ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದಅವರು, ಸೋಮನಾಥ ಜ್ಯೋತಿರ್ಲಿಂಗದ ಪವಿತ್ರ ಅವಶೇಷಗಳನ್ನು ತುಮಕೂರಿಗೆ ತರಲಾಗುತ್ತಿದ್ದ ಈ ತಿಂಗಳ 13 ಮತ್ತು 14ರಂದು ಸಾರ್ವಜನಿಕರದರ್ಶನದ ವ್ಯವಸ್ಥೆ ಮಾಡಲಾಗುತ್ತಿದೆ. ನಗರದ ಎಂ.ಜಿ.ರಸ್ತೆ, 2ನೇ ಕ್ರಾಸ್‌ನ ಜ್ಞಾನನ ಕ್ಷೇತ್ರದಲ್ಲಿ 13ರ ಶನಿವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮತ್ತು ಸಂಜೆ 4 ರಿಂದರಾತ್ರಿ 8-30 ರವರೆಗೆ ಸಾರ್ವಜನಿಕರು ಜ್ಯೋತಿರ್ಲಿಂಗ ದರ್ಶನ ಮಾಡಬಹುದು ಎಂದರು.

14ರಂದು ಭಾನುವಾರ ಎಸ್.ಎಸ್. ಪುರಂನ ಕನ್ನಿಕಾ ಮಹಲ್‌ನಲ್ಲಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮತ್ತು ಮಧ್ಯಾಹ್ನ 3 ರಿಂದ ರಾತ್ರಿ 8 ಗಂಟೆಯವರೆಗೆ ಈ ಲಿಂಗಗಳನ್ನು ದರ್ಶನಕ್ಕೆ ಇಡಲಾಗುತ್ತದೆ. ಈ ಅಮೂಲ್ಯ ಅವಶೇಷಗಳಿಗೆ ಪ್ರಾಚೀನ ವೇದ ವಿಧಿಯಾದರು ದ್ರಾಭಿಷೇಕ ಮೂಲಕ ಪೂಜೆ ನಡೆಯಲಿದೆ. ಈ ವಿಶೇಷ ಪೂಜೆಯಲ್ಲಿ ಭಗವಾನ್ ಶಿವನನ್ನು ರುದ್ರ ಸ್ವರೂಪದಲ್ಲಿ ವೇದ ಮಂತ್ರಗಳ ಜಪದೊಂದಿಗೆ ಆರಾಧಿಸಲಾಗುತ್ತದೆ. ನಂತರ ಭಕ್ತಿ ಭರಿತ ಸತ್ಸಂಗ ಕಾರ್ಯಕ್ರಮವೂ ನಡೆಯಲಿದೆ ಎಂದು ಹೇಳಿದರು.



ಈ ಪವಿತ್ರ ಅವಶೇಷಗಳು ಪುನಃ ಪ್ರತ್ಯಕ್ಷವಾದ ಕಥೆಯು ಭಾರತ ದೇಶದ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಶಕ್ತಿಯ ಪ್ರತೀಕವಾಗಿದೆ. ಕ್ರಿ.ಶ. 1026ರಲ್ಲಿ ಘಜ್ನಿಯ ಮಹ್ಮದ್ ನಡೆಸಿದ ದಾಳಿಯ ಸಮಯದಲ್ಲಿ ಧ್ವಂಸಗೊಂಡು ಕಣ್ಮರೆಯಾಗಿವೆ ಎಂದು ನಂಬಲಾಗಿದ್ದ ಈ ಅವಶೇಷಗಳು, ಸಾವಿರ ವರ್ಷಗಳ ಕಾಲ ರಹಸ್ಯವಾಗಿ ಸಂರಕ್ಷಿಸಲ್ಪಟ್ಟಿದ್ದವು ಎಂದು ತಿಳಿದುಬಂದಿದೆ. ಈ ಅಂಶಗಳನ್ನು ದಕ್ಷಿಣ ಭಾರತಕ್ಕೆತಂದ ದೈವ ಭಕ್ತ ಅಗ್ನಿಹೋತ್ರಿ ಬ್ರಾಹ್ಮಣರ ವಂಶಸ್ಥರು, ಲಿಂಗಗಳ ಪ್ರಸ್ತುತ ಸಂರಕ್ಷಕರು, ಲಿಂಗಗಳನ್ನು ಮತ್ತೆಅದರ ಪೂರ್ಣ ವೈಭವಕ್ಕೆ ಹಿಂದಿರುಗಿಸುವ ಈ ಐತಿಹಾಸಿಕ ಕ್ಷಣವನ್ನು ಮುನ್ನಡೆಸಲು ಅವರು ಜಾಗತಿಕ ಆಧ್ಯಾತ್ಮಿಕ ಗುರು ಮತ್ತು ಮಾನವತಾವಾದಿ ನಾಯಕ ಗುರುದೇವ ಶ್ರೀ ರವಿಶಂಕರ್‌ಅವರನ್ನು ಆಹ್ವಾನಿಸಿದ್ದಾರೆ ಎಂದು ಹೇಳಿದರು.ಹನ್ನೆರಡು ಜ್ಯೋತಿರ್ಲಿಂಗಗಳಲ್ಲಿ ಮೊದಲನೆಯದಾದ ಸೋಮನಾಥ ದೇವಸ್ಥಾನವು ಅನೇಕ ಬಾರಿ ಧ್ವಂಸವಾದರೂ ಪುನಃ ಪುನಃ ನಿರ್ಮಾಣಗೊಂಡು ಭಕ್ತಿಯ ಕೈರ್ಯದ ಸಂಕೇತವಾಗಿದೆ. ಮೂಲ ಲಿಂಗವು ಭೂಮಿಯಿಂದ ಸುಮಾರು ಮೂರು ಅಡಿ ಎತ್ತರದಲ್ಲಿ ತೇಲುತ್ತಿತ್ತು ಹಾಗೂ ಲಕ್ಷಾಂತರ ಭಕ್ತರು ಶಿವನನ್ನು ಜಪಿಸಿ ಪ್ರಾರ್ಥಿಸುತ್ತಾ, ಇದಕ್ಕೆ ಪೂಜೆ ಸಲ್ಲಿಸುತ್ತಿದ್ದರು ಎಂದು ಹೇಳಲಾಗುತ್ತದೆ.2007ರಲ್ಲಿ ಈ ಅಂಶಗಳ ಮೇಲೆ ನಡೆಸಿದ ಭೂ ವೈಜ್ಞಾನಿಕ ಅಧ್ಯಯನದಲ್ಲಿ ಆಶ್ಚರ್ಯಕರ ವಿಷಯವೊಂದು ಕಂಡುಬಂತು. ಸಾಮಾನ್ಯ ಅಯಸ್ಕಾಂತಗಳಿಗಿಂತ ವಿಭಿನ್ನವಾಗಿ, ಈ ರೀತಿಯಕಲ್ಲಿನ ಬಗ್ಗೆ ಯಾವುದೇ ಮಾಹಿತಿ ಲಭ್ಯವಿಲ್ಲ ಎಂದು ವಿಜ್ಞಾನಿಗಳು ತಿಳಿಸಿದ್ದಾರೆ. ಸೋಮನಾಥನಕಥೆಯು ನಮ್ಮ ಸಮಾಜ ಮತ್ತು ಸಂಸ್ಕೃತಿಯಲ್ಲಿ ಆಳವಾಗಿ ನೆಲೆಸಿದೆ. ಚಂದ್ರ ದೇವನುತನ್ನ ಕಷ್ಟಗಳಿಂದ ಮುಕ್ತನಾಗಲು ಶಿವನನ್ನು ಪ್ರಾರ್ಥಿಸಿದ್ದರಿಂದ ಈ ದೇವಸ್ಥಾನಕ್ಕೆ "ಸೋಮನಾಥ" ಎಂಬ ಹೆಸರು ಬಂದಿದೆ.ಚಂದ್ರನ ಪ್ರಭಾವ ಮಾನವನ ಮನಸ್ಸಿನ ಮೇಲೆ ಇರುವುದನ್ನು ಧಾರ್ಮಿಕ ಪರಂಪರೆಗಳು ಬಹುಕಾಲದಿಂದ ಗುರುತಿಸಿವೆ. ಅಶಾಂತ ಮನಸ್ಸಿಗೆ ಆಶ್ರಯಸ್ಥಾನವಾಗಿರುವ ಶಿವನು ತನ್ನ ಜಡೆಯಲ್ಲಿ ಅರ್ಧ ಚಂದ್ರನನ್ನು ಧರಿಸಿರುವುದು, ಭಾವನೆ ಮತ್ತು ಬುದ್ದಿಯ ಮೇಲಿನ ನಿಯಂತ್ರಣದ ಸಂಕೇತವಾಗಿದೆ ಎಂದುಕೆ.ಎನ್. ನೀಲಕಂಠಯ್ಯ ತಿಳಿಸಿದರು.

ಮುಖಂಡರಾದ. ರಮೇಶ್ ಬಾಬು, ಡಾ.ರವಿಚಂದ್ರ, ಕೆ.ಎಸ್. ಆನಂದ್, ಚೆನ್ನಯ್ಯ ಶೆಟ್ಟಿ, ಭಾಗ್ಯ ನೀಲ ಕಂಠಯ್ಯ, ನಾರಾಯಣಪ್ಪ ಮೊದಲಾದವರು ಹಾಜರಿದ್ದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿವಿಗೆ ದೈಹಿಕ ಶಿಕ್ಷಣ ನಿರ್ದೇಶಕರಾಗಿ ಡಾ.ರಾಜೇಶ್ ಆಯ್ಕೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ತುಮಕೂರು ಜಿಲ್ಲೆ ಕುಣಿಗಲ್ ತಾಲೂಕು ಅಮೃತೂರು ಹೋಬಳಿ ಎಡವಾಣಿ ಗ್ರಾಮದ ಡಾ.ರಾಜೇಶ್.ವೈ.ಹೆಚ್.ಅವರು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ಎಂ.ಎ. ಎ.ಪಿಇಡಿ, ಎಂಫೀಲ್ ಹಾಗೂ ಪಿಹೆಚ್‌ಡಿ ಪದವಿಧರರಾಗಿರುವ ಡಾ.ರಾಜೇಶ್. ವೈ.ಹೆಚ್ ಅವರು ಬೆಂಗಳೂರು ವಿವಿಯಿಂದ ಬಿ.ಎ ಪದವಿ ಪಡೆದು, ಅದೇ ವಿಶ್ವವಿದ್ಯಾಲಯದಲ್ಲಿ ಬಿ.ಇಡಿ ಪದವಿಯನ್ನು ಪಡೆದಿದ್ದಾರೆ .ಅಲ್ಲದೆ ರಾಜ್ಯ ಶಾಸ್ತ್ರ ವಿಭಾಗದಲ್ಲಿ ಎಂ.ಎ. ಪದವಿ ಪಡೆದ ನಂತರ, ಎಂ.ಇಡಿ ಪದವಿ ಪಡೆದು, ತಮಿಳುನಾಡಿದ ವಿನಾಯಕ ಮಿಷನ್ ವಿಶ್ವವಿದ್ಯಾಲಯದಲ್ಲಿ ದೈಹಿಕ ಶಿಕ್ಷಣದಲ್ಲಿ ಎಂ.ಫೀಲ್ ಪದವಿ ಪಡೆದಿದ್ದಾರೆ. ತದ ನಂತರ ಉತ್ತರ ಪ್ರದೇಶದ ಬುಂದೇಲ್‌ಖಂಡಾ ವಿವಿ ಜಾನ್ಸಿಯಲ್ಲಿ 2018ರಲ್ಲಿ ಎ ಕಾಂಪ್ಯಾರಿಟೀವ್ ಸ್ಟೇಡಿ ಅಫ್ ಕನಷ್ಟಕ್ಷನ್ ಅಫ್ ಸ್ಕಿಲ್‌ಪುಲ್‌ನೆಸ್ ಎಕ್ಸ್‌ಪೆರಿಮೆಂಟ್ ಫಾರ್ ಕಬ್ಬಡಿ ಇನ್ ಇಂಡಿಯಾ(ACOMPARATIVE STUDY OF CONSTRUCTION OF SKILLFULNESSEXPERIMENTS FAR KABBADI IN INDIA)ಎಂಬ ಪ್ರಬಂಧ ಮಂಡಿಸಿ ಪಿ.ಹೆಚ್.ಡಿ ಪದವಿಯನ್ನು ಸಹ ಪಡೆದಿದ್ದಾರೆ.

ಕಳೆದ 25 ವರ್ಷಗಳಿಂದ ದೈಹಿಕ ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ಡಾ.ರಾಜೇಶ್.ವೈ.ಹೆಚ್. ಅವರು2022-23ರಲ್ಲಿ ವಿಟಿಯುನ ಎಲ್.ಐ.ಸಿ. ಕಮಿಟಿಯ ಸದಸ್ಯರಾಗಿ, ಖೇಲ್ ಇಂಡಿಯಾ ಕೋಚ್ ಆಗಿ, 1988ರಲ್ಲಿ ಕಬ್ಬಡಿ ಆಟಗಾರನಾಗಿ ರಾಷ್ಟ್ರವನ್ನು ಪ್ರತಿನಿಧಿಸಿದ್ದು, 2019-20ರಲ್ಲಿ ಇಟಲಿಯಲ್ಲಿ ನಡೆದ ಇಂಡಿಯನ್ ಸುಮ್ಮಿಗ್ ಮಹಿಳಾ ಮತ್ತು ಪುರುಷ ವಿಶ್ವವಿದ್ಯಾಲಯ ಚಾಂಪಿಯನ್‌ನಲ್ಲಿ ಭಾರತದ ತಂಡದ ಮ್ಯಾನೇಜರ್ ಆಗಿ ಸಹ ಕಾರ್ಯನಿರ್ವಹಿಸಿದ್ದು,2010ರಲ್ಲಿ ಆರ್ಚಾಯ ನಾಗಾರ್ಜುನ ವಿವಿಯಲ್ಲಿ ನಡೆದ ದಕ್ಷಿಣ ಭಾರತ ವಿವಿಗಳ ಹ್ಯಾಂಡ್‌ಬಾಲ್ ಟೂರ್ನಿಯಲ್ಲಿ ಬೆಂಗಳೂರು ವಿವಿಯ ವ್ಯವಸ್ಥಾಪಕರಾಗಿ ಕೆಲಸ ಮಾಡಿದ್ದಾರೆ. ಆಟಗಾರರಾಗಿ ಮತ್ತು ಆಡಳಿತಗಾರರಾಗಿ ಎರಡರಲ್ಲಿಯೂ ಕೆಲಸ ಮಾಡಿದ ಅನುಭವವಿರುವ ಡಾ.ರಾಜೇಶ್.ವೈ.ಹೆಚ್. ಅವರ ಕರ್ನಾಟಕದ ತಾಂತ್ರಿಕ ಶಿಕ್ಷಣವನ್ನು ಪ್ರತಿನಿಧಿಸುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕರಾಗಿ ಆಯ್ಕೆಯಾಗುವ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಹಾಸ್ಟೇಲ್ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಆಹಾರವನ್ನು ನೀಡಿ

ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ; -ಭವಿಷ್ಯದ ಕನಸನ್ನು ಹೊತ್ತು ವಿದ್ಯಾಬ್ಯಾಸಕ್ಕಾಗಿ ಹಾಸ್ಟೇಲ್‌ನಲ್ಲಿರುವ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉತ್ತಮ ಆಹಾರವನ್ನು ನೀಡುವ ಮೂಲಕ ಅದ್ಯಯನಕ್ಕೆ ಸೂಕ್ತ ವಾತಾವರಣವನ್ನು ಸೃಷ್ಟಿಸಬೇಕೆಂದು ಅಧಿಕಾರಿಗಳಿಗೆ ಶಾಸಕ ಸಿ.ಬಿ.ಸುರೇಶ್‌ಬಾಬು ಸೂಚನೆ ನೀಡಿದರು.

ಪಟ್ಟಣದ ಪಟ್ಟಣದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಬೇಟಿ ನೀಡಿ ವಿದ್ಯಾರ್ಥಿಗಳಿಂದ ಸಮಸ್ಯೆಗಳನ್ನು ಆಲಿಸಿದ ಅವರು ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಲ್ಪಿಸುವಂತೆ ಸೂಚಿಸಿ ವಿದ್ಯಾರ್ಥಿಗಳು ತಮ್ಮ ತಂದೆ-ತಾಯಿಗಳನ್ನುಬಿಟ್ಟುಉತ್ತಮ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿ ನಿಲಯಗಳಲ್ಲಿ ವಾಸಿಸುತ್ತಿದ್ದಾರೆ. ದೊಡ್ಡ ಮಟ್ಟದಲ್ಲಿ ಬೆಳೆಯಬೇಕು ಎಂಬ ಕನಸನ್ನು ಹೊತ್ತು ಬಂದಿರುವ ಈ ಮಕ್ಕಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಅಧಿಕಾರಿಗಳು ವಿಶೇಷ ಕಾಳಜಿ ವಹಿಸಬೇಕು ಹಾಗೇ ವಿದ್ಯಾರ್ಥಿಗಳು ಇದು ನಮ್ಮ ಮನೆ ಎಂಬ ಭಾವನೆಯಿಂದ ಹಾಸ್ಪೇಲ್‌ನಲ್ಲಿ ಸ್ವಚ್ಛತೆಯನ್ನು ಕಾಪಾಡಿ, ಶಿಕ್ಷಣವೇ ಜೀವನದ ಯಶಸ್ಸಿನ ಅಡಿಪಾಯವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಗುರಿ ಹೊಂದಿ ಶ್ರದ್ಧೆ ಹಾಗೂ ಪರಿಶ್ರಮದಿಂದ ವಿದ್ಯಾಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು

ನಂತರ ಪಟ್ಟಣದ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿಕ್ಷೇತ್ರದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ಕಲ್ಪಿಸುವ ಉದ್ದೇಶದಿಂದ ಪ್ರಥಮ ಮತ್ತು ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗಾಗಿ ಪ್ರತಿ ಭಾನುವಾರ ಎಸ್ಟಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಉಚಿತ ಅಇಖಿ, ಓಇಇಖಿ ಹಾಗೂ ಎ.ಇ.ಇ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ವಿದ್ಯಾರ್ಥಿಗಳು ಈ ಸೌಲಭ್ಯದ ಸದುಪಯೋಗ ಪಡೆದುಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾಂತರಾಜು ಸಿ.ಎಸ್, ಸಮಾಜ ಕಲ್ಯಾಣಾಧಿಕಾರಿ ಶ್ರೀಧರ್ ಹಾಗೂ ಕಾಲೇಜಿನ

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ:

ಅಧಿಕಾರಿಗಳ ವಸೂಲಿ ಬಾಜಿ, ಮಧ್ಯವರ್ತಿಗಳ ಹಾವಳಿ ಆರೋಪಗಳ ಬೆನ್ನಲ್ಲೇ ರಾಮನಗರ ಆರ್‌ಟಿಒ ಕಚೇರಿ ಮೇಲೆ ಲೋಕ ರೈಡ್

ಲೋಕಯುಕ್ತಾ ದಾಳಿ ವೇಳೆ ಹಲವು ಅಕ್ರಮಗಳು ಬೆಳಕಿಗೆ | ತಾಯಿ ಬದಲಿಗೆ ಮಗಳ ಕರ್ತವ್ಯ ತರಾಟೆಗೆ ತೆಗೆದುಕೊಂಡ ಅಧಿಕಾರಿಗಳು

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಅಧಿಕಾರಿಗಳ ವಸೂಲಿ ಬಾಜಿ, ಮಧ್ಯವರ್ತಿಗಳ ಹಾವಳಿ ಆರೋಪಗಳ ಬೆನ್ನಲ್ಲೇ ಲೋಕಾಯುಕ್ತ ಅಧಿಕಾರಿಗಳು ನಗರದ ಆರ್‌ಟಿಒ ಕಚೇರಿ ಮೇಲೆ ದಿಢೀರ್ ದಾಳಿ ನಡೆಸಿ, ಪರಿಶೀಲನೆ ನಡೆಸಿದ ವೇಳೆ ಹಲವು ನ್ಯೂನತೆಗಳು ಕಂಡುಬಂದು ಪ್ರಾದೇಶಿಕ ಸಾರಿಗೆ ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡ ಘಟನೆ ಶುಕ್ರವಾರ ನಡೆದಿದೆ.ನಗರದ ಆರ್‌ಟಿಒ ಕಚೇರಿಗೆ ಬೆಳಗ್ಗೆ 10.30ರ ವೇಳೆಗೆ ಆಗಮಿಸಿದ ಲೋಕಾಯುಕ್ತ ಎಸ್‌ಪಿ ಸ್ನೇಹಾ ನೇತೃತ್ವದ ಅಧಿಕಾರಿಗಳ ತಂಡವು ಸಂಜೆ 5ರವರೆಗೂ ಪರಿಶೀಲನೆ ನಡೆಸಿತು. ಈ ವೇಳೆ ಹಲವಾರು ಲೋಪದೋಷಗಳು, ನ್ಯೂನತೆಗಳು ಕಂಡುಬಂದ ಹಿನ್ನೆಲೆಯಲ್ಲಿ



ಆರ್‌ಟಿಒ ಸತೀಶ್‌ಬಾಬು ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಡ್ರೈವಿಂಗ್ ಸ್ಕೂಲ್‌ನವರ ಪ್ರಾಬಲ್ಯ : ಲೋಕಾಯುಕ್ತ ಅಧಿಕಾರಿಗಳು ದಾಳಿ ಆರಂಭಿಸುವಷ್ಟರಲ್ಲಿ ಚಾಲನಾ ಪರವಾನಗಿ ಪಡೆಯಲು ಒಂದಷ್ಟು ಮಂದಿ ಆಗಮಿಸಿದ್ದರು. ಲೋಕಾಯುಕ್ತರ ಕಂಡ ಬೆನ್ನಲ್ಲೇ ಆರ್‌ಟಿಒ ಸಿಬ್ಬಂದಿ ಅವರನ್ನೆಲ್ಲಾ ಸಾಲಾಗಿ ನಿಲ್ಲಿಸಿ, ಶಿಸ್ತು ಪ್ರದರ್ಶಿಸಲು ಯತ್ನಿಸಿದರು. ಈ ವೇಳೆ ಅಲ್ಲಿಗೆ ಆಗಮಿಸಿದ ಅಧಿಕಾರಿಗಳು ನೀವು ಯಾವ ಶಾಲೆಯಿಂದ ಬಂದಿದ್ದೀರಿ, ಯಾವುದಕ್ಕೆ ಪರವಾನಗಿ ಪಡೆಯಲು ಬಂದಿದ್ದೀರಿ, ಎಷ್ಟು ಹಣ ನೀಡಿದ್ದೀರಿ ಎಂದು ಪ್ರಶ್ನಿಸಿದರು.

ಕೆಲವರು ಅಗತ್ಯಕ್ಕಿಂತ ಹೆಚ್ಚು ಹಣ ನೀಡಿದ್ದೇವೆ ಎಂದು ಉತ್ತರಿಸಿದರು. ಅವರು ಯಾವ ಶಾಲೆಯವರು ಎಂಬುದನ್ನು ತಿಳಿದು, ಮಾಲೀಕರಿಗೆ ಅಗತ್ಯಕ್ಕಿಂತ ಹೆಚ್ಚು ಹಣ ಏಕೆ ಪಡೆದಿದ್ದೀರಿ ಎಂದು ಪ್ರಶ್ನಿಸಿ, ಅವರನ್ನು ತರಾಟೆಗೆ ತೆಗೆದುಕೊಂಡರು. ಜತೆಗೆ ಸಾರ್ವಜನಿಕರು ಸುಳ್ಳು ಹೇಳುತ್ತಿರುವುದನ್ನು ಅರಿತ ಅಧಿಕಾರಿಗಳು ಯಾವುದಕ್ಕೆ ಎಷ್ಟು ಹಣ ನೀಡಬೇಕೆಂಬುದನ್ನು ಮೊದಲು ತಿಳಿದುಕೊಳ್ಳಬೇಕು. ನಂತರ ನಿಗದಿತ ಶುಲ್ಕವನ್ನೇ ಪಾವತಿಸಬೇಕು. ಡ್ರೈವಿಂಗ್ ಸ್ಕೂಲ್‌ನವರು ಕೇಳಿದಷ್ಟು ಹಣವನ್ನು ಕಣ್ಮುಚ್ಚಿ ನೀಡಿದರೆ ಅವರು ಶ್ರೀಮಂತರಾಗುತ್ತಾರೆ. ಸಮಾಜ ಪರಿವರ್ತನೆ ಆಗುವುದಿಲ್ಲ ಎಂದರು.

ಇದನ್ನೆಲ್ಲಾ ನೋಡಿದ ಇನ್ನಿತರೆ ಶಾಲೆಗಳವರು ತಮ್ಮವನ್ನು ಕಚೇರಿ ಕಡೆ ಬರದಂತೆ ತಡೆದರು. ವಿವಿಧ ಪರವಾನಗಿ ಪಡೆಯಲು ಆಗಮಿಸಿದ್ದ 35 ಮಂದಿ ಪೈಕಿ ಕೇವಲ ಒಬ್ಬರೇ ಒಬ್ಬರು ಮಾತ್ರವೇ ಸ್ವತಂತ್ರವಾಗಿ ಬಂದಿದ್ದರು. ಉಳಿದವರೆಲ್ಲರೂ ವಿವಿಧ ಚಾಲನಾ ತರಬೇತಿ ಶಾಲೆಗಳ ಮೂಲಕ ಬಂದವರಾಗಿದ್ದರು.

ತಾಯಿ ಬದಲಿಗೆ ಮಗಳ ಕರ್ತವ್ಯ : ಕಚೇರಿಯ ಒಳಗಡೆ ಪ್ರವೇಶಿಸಿದ ಅಧಿಕಾರಿಗಳಿಗೆ ತಾಯಿಯ ಬದಲು ಮಗಳು ಕಾರ್ಯ ನಿರ್ವಹಿಸುತ್ತಿರುವುದು ಕಂಡುಬಂತು. ಆಕೆಗೆ ಅನಾರೋಗ್ಯ ಹಿನ್ನೆಲೆಯಲ್ಲಿ ಮೌಖಿಕವಾಗಿ ಪುತ್ರಿ ಕೆಲಸ ಮಾಡಲು ಅವಕಾಶ ನೀಡಿದ್ದೇನೆ ಎಂದರು. ಇದಕ್ಕೆ ಯಾವ ಕಾನೂನಿನ ಅಡಿ ಅವಕಾಶವಿದೆ ಎಂದು ಲೋಕ ಪ್ರಶ್ನೆಗೆ ತಬ್ಬಿಬ್ಬುಗೊಂಡ ಆರ್‌ಟಿಒ ಸತೀಶ್ ಬಾಬು ಈ ರೀತಿ ಮಾಡದಂತೆ ಮರ್‍ನಾಲ್ಕು ಬಾರಿ ಎಚ್ಚರಿಕೆ ನೀಡಿದ್ದೇನೆ ಎಂದು ಸಬೂಬು ಹೇಳಿದರು. ಇದಕ್ಕೆ ಕುಪಿತಗೊಂಡ ಲೋಕ ಅಧಿಕಾರಿಗಳು ಲಿಖಿತವಾಗಿ ಏನಾದರೂ ನೀಡಿದ್ದೀರಾ, ಕೂಡಲೇ ಅವರಿಗೆ ಮೆಮೋ ನೀಡಿ ಎಂದು ಸೂಚನೆ ನೀಡಿದರು.

ದಾಳಿ ವೇಳೆ ಹಲವು ಅಕ್ರಮ ಬೆಳಕಿಗೆ : ಆರ್‌ಸಿ ಕಾರ್ಡ್, ಚಾಲನಾ ಪರವಾನಗಿ ಕಾರ್ಡ್ ಸೇರಿದಂತೆ ಕಚೇರಿಯಿಂದ ನೀಡುವ ವಿವಿಧ ಸ್ಮಾರ್ಟ್ ಕಾರ್ಡ್‌ಗಳು, ಇನ್ನಿತರ ದಾಖಲಾತಿಗಳನ್ನ ವಾಹನ ಮಾಲೀಕರ, ಚಾಲಕರ ಮನೆಗಳಿಗೆ ತಲುಪಿಸಲು, ಚಲನ್ ಪಾವತಿ ಮಾಡುವಾಗಲೇ ಕಾರ್ಡ್ ಹಾಗೂ ಮನೆಗೆ ತಲುಪಿಸಲು ತಗಲುವ ಅಂಚೆ ವೆಚ್ಚವನ್ನೂ ಪಡೆಯಲಾಗುತ್ತದೆ.

ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಪ್ರಿಂಟ್ ಆದ ಕಾರ್ಡ್ಗಳು ಇಲ್ಲಿನ ಕಚೇರಿಗೆ ಬಂದ ನಂತರ ಅವುಗಳನ್ನು ಪೋಸ್ಟ್ ಮೂಲಕ ಮನೆಗಳಿಗೆ ತಲುಪಿಸಬೇಕು. ಆದರೆ, 6 ತಿಂಗಳ ಹಿಂದೆಯೇ ಬಂದಿರುವ ಕಾರ್ಡ್ಗಳನ್ನು ಮನೆಗಳಿಗೆ ಕಳುಹಿಸದೆ ಬೀರುವಿನಲ್ಲೇ ಇಟ್ಟುಕೊಂಡಿದ್ದನ್ನು ನೋಡಿ ಲೋಕಾಯುಕ್ತರು ಕೆಂಡಾಮಂಡಲರಾದರು.

ಹೊರಗುತ್ತಿಗೆ ನೌಕರರ ಪಾರುಪತ್ಯ : ಈ ವೇಳೆ ಸಿಬ್ಬಂದಿಯನ್ನು ಪ್ರಶ್ನಿಸಿದಾಗ ಹೊರಗುತ್ತಿಗೆ ಸಿಬ್ಬಂದಿಗೆ ವಹಿಸಲಾಗಿದೆ ಎಂದು ಸಬೂಬು ಹೇಳಿ ನುಣುಚಿಕೊಳ್ಳಲು ಸರ್ಕಾರಿ ಅಧಿಕಾರಿಗಳು ಯತ್ನಿಸಿದರು. ಸಬೂಬು ಒಪ್ಪದ ಅಧಿಕಾರಿಗಳು ಇದು ನಿಮ್ಮ ಕೆಲಸ ನೀವು ಏಕೆ ಮಾಡಿಲ್ಲ ಎಂದು ಖಾರವಾಗಿ, ಏರಿದ ಧ್ವನಿಯಲ್ಲಿ ಪ್ರಶ್ನಿಸಿದರೂ ಸಿಬ್ಬಂದಿ ಮರುಮಾತಾಡದೆ ನಿಂತೇ ಇದ್ದರು. ಆರ್‌ಟಿಒ ಸಿಬ್ಬಂದಿಗಳಿಗಿಂತ ಹೊರಗುತ್ತಿಗೆ ನೌಕರರ ಪಾರುಪತ್ಯ ಕಂಡು ಲೋಕ ಅಧಿಕಾರಿಗಳು ದಿಗ್ಭ್ರಮೆಗೊಂಡರು. ಈ ವೇಳೆ ಚಾಲನಾ ಪರವಾನಗಿ ನವೀಕರಣಕ್ಕೆ ಆರು ತಿಂಗಳ ಹಿಂದೆ ಅರ್ಜಿ ಸಲ್ಲಿಸಿದ್ದರೂ ಇನ್ನೂ ಕಾರ್ಡ್ ಕೊಟ್ಟಿಲ್ಲ ಎಂದು ಸಾರ್ವಜನಿಕರೊಬ್ಬರು ದೂರಿದರು. ಲೋಕಾಯುಕ್ತ ಅಧಿಕಾರಿಗಳು ಈ ಬಗ್ಗೆ ದೂರು ದಾಖಲಿಸಿಕೊಂಡರು.



ಮಧ್ಯವರ್ತಿಗಳ ಹಾವಳಿ : ಕಚೇರಿಯಲ್ಲಿ ನಡೆಯುತ್ತಿರುವ ವಸೂಲಿಬಾಜಿ, ಮಧ್ಯವರ್ತಿಗಳ ಹಾವಳಿ ಬಗ್ಗೆ ಲೋಕಾಯುಕ್ತ ಎಸ್‌ಪಿ ಸ್ನೇಹಾ ಅವರು ಆರ್‌ಟಿಒ ಅಧಿಕಾರಿಯನ್ನು ಪ್ರಶ್ನಿಸಿದರು. ಮಧ್ಯವರ್ತಿಗಳನ್ನು ಕಚೇರಿ ಒಳಗೆ ಏಕೆ ಸೇರಿಸುತ್ತೀರಿ, ಸ್ಮಾರ್ಟ್ ಕಾರ್ಡ್ಗಳನ್ನು ಏಕೆ ತಲುಪಿಸಿಲ್ಲ, ಕಚೇರಿ ಒಳಗೆ ನಡೆದಿರುವ ಗಲಾಟೆ ಬಗ್ಗೆ ಪೊಲೀಸರಿಗೆ ಏಕೆ ದೂರು ನೀಡಿಲ್ಲ ಎಂದು ಪ್ರಶ್ನಿಸಿದರು. ಇಂದೇ ಪೊಲೀಸರಿಗೆ ದೂರು ನೀಡುವುದಾಗಿ ಆರ್‌ಟಿಒ ಸತೀಶ್ ಬಾಬು ತಿಳಿಸಿದರು.

ಸಾರ್ವಜನಿಕರ ದೂರಿನ ಹಿನ್ನೆಲೆ ದಾಳಿ : ಸಾರ್ವಜನಿಕರಿಂದ ಹಲವಾರು ದೂರುಗಳು ಬಂದ ಹಿನ್ನೆಲೆಯಲ್ಲಿ ಕಚೇರಿ ಮೇಲೆ ದಾಳಿ ನಡೆಸಿ, ಪರಿಶೀಲನೆ ನಡೆಸಲಾಗುತ್ತಿದೆ. ದಾಳಿ ವೇಳೆ ಹಲವಾರು ಲೋಪದೋಷಗಳು ಕಂಡು ಬಂದಿವೆ. ಮಧ್ಯವರ್ತಿಗಳ ಹಾವಳಿಯೂ ಸೇರಿದಂತೆ ಸ್ಮಾರ್ಟ್ ಕಾರ್ಡ್ಗಳನ್ನು ತಲುಪಿಸದಿರುವುದು, ವಸೂಲಿಬಾಜಿ ಆರೋಪಗಳು ಕೇಳಿ ಬಂದಿವೆ. ತಾಯಿಯ ಪರವಾಗಿ ಮಗಳು ಕಾರ್ಯ ನಿರ್ವಹಿಸುತ್ತಿರುವುದು ದಾಳಿ ವೇಳೆ ಬೆಳಕಿಗೆ ಬಂದಿದೆ. ಈ ಬಗ್ಗೆ ತನಿಖೆ ನಡೆಸುತ್ತೇವೆ ಎಂದು ಹೇಳಿದರು.

ಲೋಕ ರೈಡ್ ವೇಳೆ ಪೇರಿ ಕಿತ್ತ ಮಧ್ಯವರ್ತಿಗಳು

ಲೋಕಾಯುಕ್ತ ಅಧಿಕಾರಿಗಳ ದಾಳಿ ಸುದ್ದಿ ತಿಳಿಯುತ್ತಿದ್ದಂತೆ ಮಧ್ಯವರ್ತಿಗಳು ಸ್ಥಳದಿಂದ ಪರಾರಿಯಾಗಿ, ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡರು. ಡ್ರೈವಿಂಗ್ ಸ್ಕೂಲ್‌ಗಳ ಮಾಲೀಕರು ಕೂಡ ಕಚೇರಿ ಕಡೆಗೆ ತಲೆ ಹಾಕಲಿಲ್ಲ. ಆರ್‌ಟಿಒ ಕಚೇರಿ ಸುತ್ತಮುತ್ತಲಿನ ಕಂಪ್ಯೂಟರ್ ಸೆಂಟರ್‌ಗಳು ಬಾಗಿಲು ಬಂದ್ ಮಾಡಿಕೊಂಡರು. ಸದಾ ಜನರಿಂದ ತುಂಬಿರುತ್ತಿದ್ದ ಟೀ ಅಂಗಡಿಗಳು ಗಿರಾಕಿಗಳಿಲ್ಲದೆ ಬಾಗಿಲು ಮುಚ್ಚಿದವು. ಒಟ್ಟಾರೆಯಾಗಿ ಇಡೀ ಆರ್‌ಟಿಒ ಕಚೇರಿಯ ಸುತ್ತಮುತ್ತಲಿನ ಪ್ರದೇಶ ಬಿಕೋ ಎನ್ನುವಂತಾಗಿತ್ತು.

ಎಂದಿನಂತೆ ತಡವಾಗಿ ಆಗಮಿಸಿದ ಆರ್‌ಟಿಒ

ಆರ್‌ಟಿಒ ಕಚೇರಿಯಲ್ಲಿ ಸಿಬ್ಬಂದಿಗಳು ಸಾರ್ವಜನಿಕರಿಗೆ ಸರಿಯಾಗಿ



ಸ್ಪಂದಿಸುತ್ತಿಲ್ಲವೆಂಬ ದೂರು ಹಿಂದಿನಿಂದಿಲೂ ಕೇಳಿಬರುತ್ತಿದೆ. ಜತೆಗೆ ಸಮಯಕ್ಕೆ ಸರಿಯಾಗಿ ಯಾವುದೇ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಇಲಾಖಾ ಮುಖ್ಯಸ್ಥರು ಜಿಲ್ಲಾ ಕೇಂದ್ರದಲ್ಲೇ ವಾಸ್ತವ್ಯ ಹೂಡಬೇಕೆನ್ನುವ ನಿಯಮವಿದ್ದರೂ, ಅದನ್ನು ಗಾಳಿಗೆ ತೂರಿರುವ ಅಧಿಕಾರಿಗಳು ಗಂಟೆಗಟ್ಟಲೆ ತಡವಾಗಿ ಕರ್ತವ್ಯಕ್ಕೆ ಆಗಮಿಸುವುದನ್ನು ಚಾಳಿಯನ್ನಾಗಿ ಮಾಡಿಕೊಂಡಿದ್ದಾರೆ. ಗಂಟೆಗಟ್ಟಲೆ ಕಾಯಬೇಕಾದ ಅನಿವಾರ್ಯ ಮಾತ್ರ ಸಾರ್ವಜನಿಕರದ್ದು.

ಆರ್‌ಟಿಒ ಕಚೇರಿ ಮೇಲೆ ಲೋಕಾ ಅಧಿಕಾರಿಗಳು ದಾಳಿ ನಡೆಸಿದಾಗ ಆರ್‌ಟಿಒ ಕಚೇರಿಯಲ್ಲಿರಲಿಲ್ಲ. ಆರ್‌ಟಿಒ ದಾಳಿ ಸುದ್ದಿ ಕೇಳಿ ದೌಡಾಯಿಸಿ ಬಂದ ಆರ್‌ಟಿಒ ಸತೀಶ್ ಬಾಬು ಲೋಕಾಯುಕ್ತರ ಮುಂದೆ ಪೆಚ್ಚು ಮೋರೆ ಹಾಕಿ ನಿಂತಿದ್ದು ಕಂಡು ಬಂತು.

ಜೂ. 19, 20ರಂದು ಆರ್‌ಟಿಒ ಕಚೇರಿಯಲ್ಲಿ ಜನಸಂಪರ್ಕ ಸಭೆ

ಜೂನ್ 19, 20ರಂದು ಆರ್‌ಟಿಒ ಕಚೇರಿಯಲ್ಲಿ ಜನಸಂಪರ್ಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಹಿಂದೆ ಬೇರೆ ಸ್ಥಳಗಳಲ್ಲಿ ಈ ರೀತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿತ್ತು. ಸರಿಯಾಗಿ ಸೇವೆ ದೊರೆಯದ ಬಗ್ಗೆ ಹಲವಾರು ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಈ ಬಾರಿ ಆರ್‌ಟಿಒ ಕಚೇರಿ ಆವರಣದಲ್ಲಿ ಜನಸಂಪರ್ಕ ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದೆ. ಸಾರ್ವಜನಿಕರು ಕಚೇರಿಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳ ಬಗ್ಗೆ ನಮಗೆ ದೂರು, ಅಹವಾಲುಗಳನ್ನು ಸಲ್ಲಿಸಬಹುದು. ಈ ಬಗ್ಗೆ ತನಿಖೆ ನಡೆಸಿ, ಸಾರ್ವಜನಿಕರ ಕೆಲಸಗಳನ್ನು ನಿಗದಿ ಅವಧಿಯೊಳಗೆ ಮಾಡಿಸಿಕೊಡಲಾಗುವುದು. ಜತೆಗೆ ಕರ್ತವ್ಯಲೋಪ ಎಸಗಿದ ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಂದರು.

ಮೊಬೈಲ್ ಆ್ಯಪ್ ಮೂಲಕ ರಸಗೊಬ್ಬರ ಖರೀದಿಸುವ ಕುರಿತು ರೈತರಿಗೆ ಮಾಹಿತಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕೃಷಿ ಇಲಾಖೆಯು ಮೊಬೈಲ್ ಆ್ಯಪ್ ಮೂಲಕ ರಸಗೊಬ್ಬರವನ್ನು ಖರೀದಿಸುವ ಕುರಿತು ರೈತರಿಗೆ ಮಾಹಿತಿ ನೀಡಿದೆ.

ರೈತರು ತಾವಿರುವ ಸ್ಥಳದಿಂದಲೇ "ಫ್ರೇಮ್‌ವರ್ಕ್ ಫಾರ್ ಫರ್ಟಿಲೈಸರ್ ಸೇಲ್(ಈಈಖ)' ಮೊಬೈಲ್ ಆ್ಯಪ್ (ಆಂಡ್ರಾಯ್ಡ್) ಮೂಲಕ ರಸಗೊಬ್ಬರವನ್ನು ಕಾಯ್ದಿರಿಸುವ ವಿನೂತನ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ಆಯ್ದ ರಾಜ್ಯಗಳ ಪೈಕಿ ಕರ್ನಾಟಕದಲ್ಲಿ ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳನ್ನು ಪ್ರಾಯೋಗಿಕವಾಗಿ ಆಯ್ಕೆ ಮಾಡಲಾಗಿದೆ.

ರಸಗೊಬ್ಬರ ಖರೀದಿ ಪ್ರಕ್ರಿಯೆ ಸರಳವಾಗಿಸಲು ಕೇಂದ್ರ ಸರ್ಕಾರ "ಫರ್ಟಿಲೈಸರ್ಸ್ ಸೇಲ್ಸ್ ಅಪ್ಲಿಕೇಷನ್ ಸಿಸ್ಟಮ್" (**FSAS**) ಎಂಬ ವಿನೂತನ ವ್ಯವಸ್ಥೆ ಜಾರಿಗೊಳಿಸಿ, "ಫ್ರೇಮ್‌ವರ್ಕ್ ಫಾರ್ ಫರ್ಟಿಲೈಸರ್ ಸೇಲ್(**FFS**)' ಎಂಬ ಮೊಬೈಲ್ ಆ್ಯಪ್ ಅನ್ನು ಬಿಡುಗಡೆ ಮಾಡಿದೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ದೇಶದ ಎಲ್ಲ ರಾಜ್ಯಗಳಲ್ಲಿ ಪ್ರಾಯೋಗಿಕವಾಗಿ ಈ ವ್ಯವಸ್ಥೆ ಅನುಷ್ಠಾನಗೊಳಿಸುತ್ತಿದ್ದು, ಪ್ರತಿ ರಾಜ್ಯದ ಎರಡು ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದ್ದು, 17 ಜೂನ್ 2026 ರಿಂದ ಮೊಬೈಲ್ ಆ್ಯಪ್ ಬಳಕೆಗೆ ಅಧಿಕೃತ ಚಾಲನೆ ದೊರೆಯಲಿದೆ.

ರೈತರು ತಮ್ಮೆಲ್ಲ ಕೆಲಸ ಬಿಟ್ಟು ರಸಗೊಬ್ಬರಕ್ಕಾಗಿ ಅಂಗಡಿಗಳ ಮುಂದೆ ಸರತಿ ಸಾಲಿನಲ್ಲಿ ನಿಂತು ಗಂಟೆಗಟ್ಟಲೆ ಕಾಯುವ ಅವಶ್ಯಕತೆ ಇರುವುದಿಲ್ಲ. ಮೊಬೈಲ್ ಆ್ಯಪ್ ಮೂಲಕ ರೈತರು ಹತ್ತಿರದ ಗೊಬ್ಬರದ ಅಂಗಡಿಗೆ ಬುಕ್ ಮಾಡಿದಾಗ ಮೊಬೈಲ್ ಆ್ಯಪ್‌ನಲ್ಲಿ **QR CODE Genarate** ಆಗುತ್ತದೆ. ಸದರಿ ಕಿಖ ಅಔಆಇ ಬಳಸಿ 3 ದಿನದೊಳಗೆ ರೈತರು ಗೊಬ್ಬರ ಖರೀದಿಸಬಹುದು. ಇದರಿಂದ ರೈತರಿಗೆ ದೊರೆಯುವ ಗೊಬ್ಬರ ಅನ್ಯರ ಪಾಲಾಗುವುದಿಲ್ಲ. ಕೈಗಾರಿಕೆ ಉದ್ದೇಶ ಸೇರಿ ಯೂರಿಯಾ ಮತ್ತಿತರ ಗೊಬ್ಬರಗಳ ದುರ್ಬಳಕೆ, ಕಾಳಸಂತೆ ಮಾರಾಟಕ್ಕೆ ಈ ವ್ಯವಸ್ಥೆ ಕಡಿವಾಣ ಹಾಕುತ್ತದೆ.

ರೈತರು ಕಾಮನ್ ಸರ್ವಿಸ್ ಸೆಂಟರ್ (ಸಿಎಸ್‌ಸಿ) ಮುಖಾಂತರ ರಸಗೊಬ್ಬರವನ್ನು ಕಾಯ್ದಿರಿಸಬಹುದು. ರಸಗೊಬ್ಬರ ಅಂಗಡಿ ಮಾಲೀಕರು ಸಹ ಸ್ವಯಂಪ್ರೇರಿತವಾಗಿ ರಸಗೊಬ್ಬರಗಳನ್ನು ಮೊಬೈಲ್ ಆ್ಯಪ್ ಮೂಲಕ ಬುಕ್ ಮಾಡಲು ಸಹಕರಿಸುತ್ತಾರೆ. ದೇಶಾದ್ಯಂತ ಗ್ರಾಮ ಮಟ್ಟದಿಂದ ರಾಷ್ಟ್ರಮಟ್ಟದವರೆಗೆ ಗೊಬ್ಬರಕ್ಕೆ ಇರುವ ಬೇಡಿಕೆ ಈ ವ್ಯವಸ್ಥೆಯಡಿ ಸರ್ಕಾರಗಳ ಗಮನಕ್ಕೆ ಬರಲು ಈ ಮೊಬೈಲ್ ಆ್ಯಪ್ ಸಹಕಾರಿಯಾಗಲಿದೆ. ಇದರಿಂದ ಯೋಜಿತ ಬೇಡಿಕೆಯನ್ವಯ ದೇಶಾದ್ಯಂತ ಗೊಬ್ಬರದ ಸುಸ್ಥಿರ ಪೂರೈಕೆ ಸಾಧ್ಯವಾಗಲಿದ್ದು, ಆಹಾರ ಭದ್ರತೆಗೂ ಇದು ನೆರವಾಗಲಿದೆ. ಗೊಬ್ಬರದ ಬೇಡಿಕೆಗೆ ಅನುಗುಣವಾಗಿ ದಾಸ್ತಾನು ಮಾಡಿಕೊಳ್ಳಲು ಅನುವಾಗಲಿದೆ. ಪ್ರತಿ ವಹಿವಾಟು ಡಿಜಿಟಲೀಕರಣ ರೂಪದಲ್ಲಿದ್ದು, ಮೊಬೈಲ್ ಆ್ಯಪ್ ಬಳಸುವ ವಿಧಾನ (ಫ್ರೇಮ್‌ವರ್ಕ್ ಫಾರ್ ಫರ್ಟಿಲೈಸರ್ ಸೇಲ್–ಈಈಖ) ರೈತರು ತಮ್ಮ ಆಂಡ್ರಾಯ್ಡ್ ಮೊಬೈಲ್‌ನಲ್ಲಿ ಆ್ಯಪ್ ಡೌನ್‌ಲೋಡ್ ಮಾಡಿಕೊಳ್ಳಬೇಕು. ಆ್ಯಪ್‌ನಲ್ಲಿ ಆಧಾರ್ ಸಂಖ್ಯೆ ಅಥವಾ ಎಫ್‌ಐಡಿ ನಮೂದಿಸಿದಾಗ ಆಧಾರ್‌ಗೆ ಲಿಂಕ್ ಆದ ಮೊಬೈಲ್ ಸಂಖ್ಯೆಗೆ ಒಟಿಪಿ ಬರುತ್ತದೆ. ತದನಂತರ ಮೊಬೈಲ್ ಆ್ಯಪ್‌ನಲ್ಲಿ ಹಿಡುವಳಿ ವಿಸ್ತೀರ್ಣದ ಮಾಹಿತಿ ಲಭ್ಯವಾಗುತ್ತದೆ. "ಏಥಿ ಈಚಿಡಿಟ" ಣಚಿಛ ಬಟನ್ ಒತ್ತಿದಾಗ ಬೆಳೆ ವಿವರ ಲಭ್ಯವಾಗುತ್ತವೆ. ಬೆಳೆ ವಿವರ ದಾಖಲಿಸಿದ ನಂತರ ಠಿರಿಟಿಥಿ ಜಿಠಿಡಿ ಜಿಜಡಿಣುಟುದಜಡಿ ಬಟನ್ ಒತ್ತಿದಾಗ ಗ್ರೇಡ್ ವಾರು ರಸಗೊಬ್ಬರದ ವಿವರ ಲಭ್ಯವಾಗುತ್ತದೆ. ರಸಗೊಬ್ಬರದ ವಿವರವನ್ನು ದಾಖಲಿಸಿದ ನಂತರ ಹತ್ತಿರದ ಚಿಲ್ಲರೆ ರಸಗೊಬ್ಬರ ಮಾರಾಟ ಮಳಿಗೆಯನ್ನು ಆಯ್ಕೆ ಮಾಡುವುದು. ಆಯ್ಕೆ ಮಾಡಿದ ನಂತರ **Submit** ಬಟನ್ ಒತ್ತಿದಾಗ ಕಿಖ ಅಔಆಇ ಉಜಟಿಚಿಡಿಚಿಣಜ ಆಗುವುದರ ಮುಖಾಂತರ ರಸಗೊಬ್ಬರವನ್ನು ಕಾಯ್ದಿರಿಸಲಾಗುತ್ತದೆ.ಬುಕಿಂಗ್ ಬಳಿಕ ಬರುವ ಕ್ಯೂಆರ್ ಕೋಡ್ ಅನ್ನು ಗೊಬ್ಬರದ ಅಂಗಡಿಯವರು ಸ್ಕ್ಯಾನ್ ಮಾಡಿ ಗೊಬ್ಬರ ನೀಡುತ್ತಾರೆ. ರೈತರು ಖುದ್ದಾಗಿ ಹೋಗಲು ಆಗದಿದ್ದರೆ ರೈತರ ಪರ ಬೇರೊಬ್ಬ ವ್ಯಕ್ತಿ ಹೋಗಬಹುದು. ಆ ಬೇರೊಬ್ಬ ವ್ಯಕ್ತಿ ಒಟಿಪಿ, ಕ್ಯೂಆರ್ ಕೋಡ್ ಹಾಗೂ ತನ್ನ ಆಧಾರ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿದೆ. ಯುಪಿಐ ಮೂಲಕ ರಸಗೊಬ್ಬರ ಮಾರಾಟಗಾರರಿಗೆ ಹಣ ಪಾವತಿಸಿ ರಸಗೊಬ್ಬರವನ್ನು ಪಡೆಯಬಹುದು. **Farmer ID** ಹೊಂದದೆ ಇರುವ ರೈತರು(**Share croppers, Tenant, Forest Right Patta holder, Temple land, Government land/ KVK/Institutional land**) ಸಹ ರಸಗೊಬ್ಬರ ಖರೀದಿಸಲು ಪ್ರಸಕ್ತ ಸಾಲಿನಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ತುಮಕೂರುಬೆಸ್ಕಾಂ ನಗರ ಉಪವಿಭಾಗ–1ರ ವ್ಯಾಪ್ತಿಯಲ್ಲಿ ಫೀಡರ್ ನಿರ್ವಹಣೆ ಮತ್ತು ರಸ್ತೆ ಅಗಲೀಕರಣ ಕಾಮಗಾರಿಯಲ್ಲಿ ವಿದ್ಯುತ್ ಕಂಬಗಳನ್ನು

ನರೇಂದ್ರ ಮೋದಿ ಪ್ರಧಾನಿಯಾಗಿ ದೀರ್ಘಕಾಲದ ಆಡಳಿತ ನಡೆಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ

ರಾಮನಗರ : ಭಾರತ ದೇಶ ಮೋದಿ ಅವರ ನಾಯಕತ್ವದಲ್ಲಿ ಸದೃಢವಾಗಿದ್ದು, ಪ್ರಗತಿಯತ್ತ ಸಾಗಿದೆ ಇಂದು ವಿಶ್ವದಲ್ಲಿ ಗೌರವ ಹೆಚ್ಚಾಗಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಪ್ರಧಾನಿಯಾಗಿ ದೀರ್ಘಕಾಲದ ಆಡಳಿತ ನಡೆಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ಅದಕ್ಕಾಗಿ ಪ್ರತಿಯೊಬ್ಬ ಭಾರತೀಯನು ಅವರನ್ನು ಅಭಿನಂದಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್.ಮಂಜುನಾಥ್ ತಿಳಿಸಿದರು.

ಶುಕ್ರವಾರ ನಗರದ ಜಿಲ್ಲಾ ವಕೀಲರ ಸಂಘಕ್ಕೆ ಸಂಸದರು ಭೇಟಿ ನೀಡಿದರು. ಈ ವೇಳೆ ವಕೀಲರೊಂದಿಗೆ ಸುದೀರ್ಘವಾಗಿ ಚರ್ಚಿಸಿದರು. ವಕೀಲರು ತಮಗೆ ಆಗಬೇಕಾಗಿರುವ ಕೆಲಸದ ಕುರಿತು ಸಂಸದ ಮಂಜುನಾಥ್ ಅವರ ಗಮನಕ್ಕೆ ತಂದರು.

ಈ ವೇಳೆ ಮಾತನಾಡಿದ ಅವರು, ನಾನು ಸಂಸದನಾದ ಬಳಿಕ ಇದೇ ಮೊದಲ ಬಾರಿಗೆ ಬೆಂಗಳೂರು ದಕ್ಷಿಣ(ರಾಮನಗರ) ಜಿಲ್ಲಾ ವಕೀಲರ ಸಂಘಕ್ಕೆ ಭೇಟಿ ನೀಡುತ್ತಿದ್ದೇನೆ. ಈ ವೇಳೆ ವಕೀಲರೊಂದಿಗೆ ಸಾಕಷ್ಟು ವಿಚಾರಗಳ ಬಗ್ಗೆ ಚರ್ಚಿಸಿದ್ದೇನೆ. ನನಗೂ ಮಳೆಗಾಲದ ಅಧಿವೇಶನದಲ್ಲಿ ವಕೀಲರ ಸಮಸ್ಯೆ ಕುರಿತು ಚರ್ಚಿಸಲು ಸಾಕಷ್ಟು ವಿಷಯಗಳು ದೊರತಿದೆ. ನಾವು ಸಂಸತ್ತಿನಲ್ಲಿ ಭಾಗವಹಿಸುವ ಸಂದರ್ಭದಲ್ಲಿ ಸಲಹೆಗಳು ಬಹಳ ಮುಖ್ಯ, ಒಂದೊಂದು ಕ್ಷೇತ್ರದ ವಿಷಯಗಳು ಮುಖ್ಯವಾಗಲಿದೆ. ಕೆಲವು ಬದಲಾವಣೆಗಳಿಗಾಗಿ ಇದು ಅತೀ ಮುಖ್ಯ ಎನಿಸಿಕೊಳ್ಳಲಿದೆ ಎಂದರು. ದೂರದೃಷ್ಟಿಯ ನಾಯಕತ್ವ : ಬಳಿಕ



ಸುದ್ದಿಗಾರರ ಜೊತೆ ಮಾತನಾಡಿದ ಅವರು ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿ ಪ್ರಧಾನಿಯಾಗಿದ್ದಾರೆ ಹಿಂದೆಯೂ ಕೂಡ 12 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಕಾರ್ಯನಿರ್ವಹಿಸಿದ್ದರು. ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರ 4,398 ದಿನಗಳ ದಾಖಲೆಯನ್ನು ಮುರಿದು 4,399 ದಿನ ಪ್ರಧಾನಿಯಾಗುವ ಮೂಲಕ ದೀರ್ಘಾವಧಿ ಪ್ರಧಾನಿ ಎಂಬ ಗೌರವಕ್ಕೆ ಪಾತ್ರರಾಗಿದ್ದಾರೆ. ಅವರ ನಾಯಕತ್ವ ಮತ್ತು ಸಾರ್ವಜನಿಕ ಸೇವಾ ಸಮರ್ಪಣೆ ಶ್ಲಾಘನೀಯ. ಆರ್ಥಿಕ ಬೆಳವಣಿಗೆ, ಮೂಲಸೌಕರ್ಯ ವಿಸ್ತರಣೆ, ಸಾಮಾಜಿಕ ಸಬಲೀಕರಣ, ತಾಂತ್ರಿಕ ಪ್ರಗತಿ ಹಾಗೂ ಜಾಗತಿಕ ಮಟ್ಟದಲ್ಲಿ ಭಾರತದ ಪ್ರಭಾವ ವೃದ್ಧಿಯಾಗಲು ಮೋದಿ ಅವರ ದೂರದೃಷ್ಟಿಯ ನಾಯಕತ್ವ ಕಾರಣವಾಗಿದೆ ಎಂದು ಹೇಳಿದರು.

ಸುದೀರ್ಘ 12 ವರ್ಷಗಳ ಆಡಳಿತದಲ್ಲಿ ರೈಲ್ವೆ, ರಸ್ತೆ, ಜಲಮಾರ್ಗ ಎಲ್ಲಾ ಕಾಮಗಾರಿಗಳು ಗಣನೀಯವಾಗಿ ಏರಿಕೆಯಾಗಿದೆ. ಅನ್ನದಾತ ಯೋಜನೆಯಲ್ಲಿ 85ಕೋಟಿ ಜನರಿಗೆ ಉಚಿತವಾಗಿ ಅಕ್ಕಿಯನ್ನು ಕೇಂದ್ರ ಸರ್ಕಾರ ಕೊಡುತ್ತಿದೆ. 55ಕೋಟಿ ಜನರಿಗೆ ಆಯುಷ್ಯಮಾನ್ ಭಾರತ್ ಸೇವೆ ನೀಡುತ್ತಿದೆ. ವೈದ್ಯಕೀಯ ಕಾಲೇಜುಗಳ ಸಂಖ್ಯೆಯು ಏರಿಕೆಯಾಗಿದೆ. ಮೊದಲು 350 ಇತ್ತು ಈಗ 822ಕ್ಕೆ ಏರಿಕೆಯಾಗಿದೆ. ಎಂ.ಬಿ.ಬಿಎಸ್ ಸೀಟ್ 50000ಕ್ಕಿಂತ 1023000ಕ್ಕೆ ಏರಿಕೆಯಾಗಿದೆ. ಕ್ಯಾನ್ಸರ್‌ಗೆ ಬೇಕಾಗಿರುವ ದುಬಾರಿ ಔಷಧಿಗಳನ್ನು ತಯಾರಿಸಿದ್ದಾರೆ. ಹೆಣ್ಣು ಮಕ್ಕಳಿಗೆ ಗರ್ಭ ಕ್ಯಾನ್ಸರ್ ತಡೆಯುವುದಕ್ಕೆ ಹಲವು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಭಾರತ ಸದೃಢ : ಭಾರತ ದೇಶ ನರೇಂದ್ರ ಮೋದಿ ನಾಯಕತ್ವದಲ್ಲಿ ಆರ್ಥಿಕವಾಗಿ ಸದೃಢವಾಗುತ್ತಿದೆ. ಇದು ಜಗತ್ತಿನಲ್ಲಿ ಆರ್ಥಿಕತೆಯ ನಾಲ್ಕನೆ ದೊಡ್ಡ ದೇಶವಾಗಿ ಬೆಳೆದಿದೆ. ಜಾಗತಿಕ ಸಮಸ್ಯೆ ಇದ್ದರೂ ಭಾರತದ ಆರ್ಥಿಕ ಪ್ರಗತಿ ಶೇ. 7.7 ರಷ್ಟಿದೆ. ಅಮೇರಿಕ, ಚೀನಾದಂತಹ ದೇಶಗಳಲ್ಲಿಯೇ ಅರ್ಥಿಕ ಪ್ರಗತಿ ಹೊಂದಲು ಸಾಧ್ಯವಾಗುತ್ತಿಲ್ಲ. ಇಷ್ಟೆಲ್ಲ ಕೊಲ್ಲಿ ಯುದ್ಧಗಳು ನಡೆಯುತ್ತಿದ್ದರು, ಇಂದು ಭಾರತೀಯರಿಗೆ ಹೊರೆ ಆಗಬಾರದೆಂದು ಅನಿಲ ಉತ್ಪನ್ನಗಳ ಪ್ರಮಾಣ ಕಡಿಮೆ ಇದೆ. ಇದನ್ನು ಬೇರೆ ಪ್ರಪಂಚದ ಇತರೆ ದೇಶಗಳಿಗೆ ಹೋಲಿಸಿದರೆ ಕಡಿಮೆ ಇದೆ. ಕೇಂದ್ರ ಸರ್ಕಾರ ಭಾರತದ ರಕ್ಷಣಾ ವ್ಯವಸ್ಥೆಗೆ ಸುಮಾರು 8 ಲಕ್ಷಕೋಟಿ ಮೀಸಲಿಟ್ಟಿದೆ. ಅದಕ್ಕಾಗಿ ಪ್ರಧಾನಿಯವರನ್ನು ಅಭಿನಂಧಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ವಕೀಲರ ಸಂಘದ ಮಾಜಿ ಅಧ್ಯಕ್ಷ ಎ.ಪಿ.ರಂಗನಾಥ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕೆಂಪಯ್ಯ, ಉಪಾಧ್ಯಕ್ಷ ಜಯರಾಮ್, ಕಾರ್ಯದರ್ಶಿ ಚಂದ್ರಶೇಖರ್, ಖಜಾಂಚಿ ಜ್ಯೋತಿ, ಕಾರ್ಯಕಾರಿ ಸಮಿತಿಯ ಸದಸ್ಯರಾದ ಸ್ಮಿತಾ, ಕಿರಣ್, ದರ್ಶನ್, ಬೆಟ್ಟೇಗೌಡ, ಚಂದನ್ ವಕೀಲರಾದ ಶ್ರೀವತ್ಸ, ಆರ್.ವಿ.ದೇವರಾಜು, ತಿಮ್ಮೇಗೌಡ, ಸುಬ್ಬಶಾಸ್ತ್ರಿ, ರಂಗಸ್ವಾಮಿ, ಮಂಜೇಶ್ ಗೌಡ, ಜೆ.ದರ್ಶನ್ ಮತ್ತಿತರರು ಇದ್ದರು

ರಾಮನಗರ ಜಿಲ್ಲೆಯ ಎಲ್ಲಾ ತಾಲ್ಲೂಕು ಹಾಗೂ ವಿಶೇಷ ಸುದ್ದಿಗಾಗಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
ಬಿಡದಿ ಮಹೇಶ್ : ವರದಿಗಾರರರು 99728 34055

31ನೇ ವಾರದ ಮನೆಬಾಗಿಲಿಗೆ ಮನೆ ಮಗ ಕಾರ್ಯಕ್ರಮ – ಶಾಸಕರಿಗೆ ಅಹವಾಲುಗಳ ಮಹಾಪೂರ

ಜನರ ಸಮಸ್ಯೆ ಬಗೆ ಹರಿಸುವುದೇ ಮುಖ್ಯ ಗುರಿ: ಶಾಸಕ ಸಿ.ಬಿ. ಸುರೇಶ್ ಬಾಬು

ಸೂರ್ಯಪ್ರಗತಿನ್ಯೂಸ್.ಕಾಂ

ಹುಳಿಯಾರು : ಮನೆಬಾಗಿಲಿಗೆ ಮನೆಮಗ ಜನಸ್ಪಂದನಾ ಕಾರ್ಯಕ್ರಮವು ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಯಶಸ್ವಿಯಾಗಿ ನಡೆಯುತ್ತಿದ್ದು, ಜನರ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಒದಗಿಸುವುದೇ ಇದರ ಮುಖ್ಯ ಉದ್ದೇಶವಾಗಿದೆ ಎಂದು ಶಾಸಕ ಸಿ.ಬಿ. ಸುರೇಶ್ ಬಾಬು ತಿಳಿಸಿದರು.

ಪಟ್ಟಣದ ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ಮುಂಭಾಗದಲ್ಲಿ ಶುಕ್ರವಾರ ನಡೆದ 31ನೇ ವಾರದ ಮನೆಬಾಗಿಲಿಗೆ ಮನೆ ಮಗ ಶೀರ್ಷಿಕೆಯ ಜನಸ್ಪಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈವರೆಗೆ ತಾಲೂಕಿನ ಅನೇಕ ಹಳ್ಳಿಗಳಿಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದ್ದೇವೆ. ಕೆಲ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸಿದ್ದು, ಉಳಿದ ಅಹವಾಲುಗಳನ್ನು ಸಂಬಂಧಿತ ಇಲಾಖೆಗಳಿಗೆ ಕಳುಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದ ಅವರು.

ಸಾರ್ವಜನಿಕರು ಯಾವುದೇ ಮಧ್ಯವರ್ತಿಗಳ ಅಥವಾ ಲಂಚದ ಆಮಿಷವಿಲ್ಲದೆ, ಪಕ್ಷಾತೀತವಾಗಿ, ಯಾವುದೇ ಜಾತಿ ಬೇದವಿಲ್ಲದೇ ನೇರವಾಗಿ ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ. ಇದರಿಂದ ಸಾರ್ವಜನಿಕರು ಕಚೇರಿಗಳಿಗೆ ಅಲೆದಾಡುವ ತೊಂದರೆ ತಪ್ಪಿ, ಅಧಿಕಾರಿಗಳು ಸ್ಥಳದಲ್ಲಿಯೇ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ ಎಂದರು.



ಕಾರ್ಯಕ್ರಮದಲ್ಲಿ ನಿವೇಶನ, ಸಮುದಾಯ ಭವನ, ಹಿಂದೂ ರುದ್ರಭೂಮಿ, ಪಡಿತರ ಚೀಟಿ, ಬೀದಿ ದೀಪ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಸಾರ್ವಜನಿಕರು ಮನವಿಗಳನ್ನು ಸಲ್ಲಿಸಿದರು. ಹುಳಿಯಾರಿನ 12, 13, 14 ಹಾಗೂ 15ನೇ ವಾರ್ಡ್‌ಗಳಲ್ಲಿ ಮತ್ತು 16ನೇ ವಾರ್ಡ್‌ನ ಶಂಕರಪುರ ಬಡಾವಣೆಯಲ್ಲಿ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಮಮತಾ, ಆರ್‌ಐ ಶ್ರೀನಿವಾಸ್, ಮುಖ್ಯಾಧಿಕಾರಿ ಮಂಜುನಾಥ್, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಪ್ರೀತಿ ರಾಘವೇಂದ್ರ, ಉಪಾಧ್ಯಕ್ಷೆ ಕಾವ್ಯಾರಾಣಿ, ಸದಸ್ಯರಾದ ಎಸ್.ಆರ್.ಎಸ್. ದಯಾನಂದ್, ಹೇಮಂತ್ ಕುಮಾರ್ ಹಾಗೂ ಮುಖಂಡ ರಾದ ಗೌಡಿ, ರಾಘವೇಂದ್ರ, ಕುಮಾರ್, ಬೈರೇಶ್, ಡಿಶ್ ಬಾಬು, ಗಣೇಶ್, ಕಿರಣ್, ರವಿರಾಜ್ ಸೇರಿದಂತೆ ಹಲವರು ಹಾಜರಿದ್ದರು.

ಇದೇ ಸಂದರ್ಭದಲ್ಲಿ ಕರ್ನಾಟಕದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಖಾಸಗಿ ಕಂಪನಿಯೊಂದಕ್ಕೆ ವಿದ್ಯುತ್ ವಿತರಣಾ ಪರವಾನಗಿ ನೀಡುವುದನ್ನು ವಿರೋಧಿಸಿ ಶಾಸಕರಾದ ಸಿ.ಬಿ.ಸುರೇಶ್ ಬಾಬು ರವರಿಗೆ ಆಕ್ಷೇಪಣಾ ಮನವಿ ಪತ್ರ ಸಲ್ಲಿಸಲಾಯಿತು.

ಮುಂಬರುವ ವಿಧಾನಸಭಾ ಅಧಿವೇಶನದಲ್ಲಿ ಈ ಖಾಸಗೀಕರಣ ಪ್ರಕ್ರಿಯೆಯ ವಿರುದ್ಧ ಸದನದಲ್ಲಿ ಬಲವಾಗಿ ಧ್ವನಿ ಎತ್ತಬೇಕು ಮತ್ತು ರೈತರ ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ಸರ್ಕಾರದ ಮೇಲೆ ಒತ್ತಡ ತರಬೇಕು ಎಂದು ರೈತ ಸಂಘದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆಂಕೆರೆ ಸತೀಶ್, ಚಿಕ್ಕನಾಯಕನಹಳ್ಳಿ ತಾಲ್ಲೂಕು ಅಧ್ಯಕ್ಷರಾದ ಜಿ.ಎಸ್. ಮಲ್ಲಿಕಾರ್ಜುನಯ್ಯ, ಕಾರ್ಯದರ್ಶಿ ರಘುನಾಥ್, ಹಾಗೂ ಜಿಲ್ಲಾ ಸಂಚಾಲಕರಾದ ಎಚ್.ಎನ್.ಸತೀಶ್ ಸೇರಿದಂತೆ ಪ್ರಮುಖರು ಮನವಿ ಮಾಡಿದರು.

ಶ್ರೀರಂಗ ವಿದ್ಯಾಮಂದಿರದಲ್ಲಿ ಮಕ್ಕಳ ಅಕ್ಷರಾಭ್ಯಾಸ

ತುಮಕೂರು: ಜಿಲ್ಲಾ ಕುಂಚಿಟಿಗ ಒಕ್ಕಲಿಗರ ವಿದ್ಯಾಭಿವೃದ್ಧಿ ಸಂಘದ ನಗರದ ಬಟವಾಡಿಯ ಶ್ರೀರಂಗ ವಿದ್ಯಾಮಂದಿರ ಶಾಲೆಯಲ್ಲಿ ಶುಕ್ರವಾರ ಮಕ್ಕಳಿಗೆ ಅಕ್ಷರಾಭ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಇದರ ಅಂಗವಾಗಿ ಶಾಲೆಯ ಆವರಣದಲ್ಲಿ ಬಣ್ಣ ಬಣ್ಣದ ರಂಗೋಲಿ ಹಾಕಿ, ತಳಿರುತೋರಣ ಕಟ್ಟಿ ಅಲಂಕರಿಸಲಾಗಿತ್ತು.ಶಾಲೆಗೆ ಪ್ರವೇಶ ಮಕ್ಕಳನ್ನು ಆಡಳಿತ ಮಂಡಳಿ ಪದಾಧಿಕಾರಿಗಳು, ಶಿಕ್ಷಕರು ಶಾಲೆಗೆ ಮೊದಲ ಬಾರಿಗೆ ಆಗಮಿಸಿದ ಮಕ್ಕಳನ್ನು ಸ್ವಾಗತಿಸಿ, ಸಿಹಿ ವಿತರಿಸಿ ಬರಮಾಡಿಕೊಂಡರು.



ಅಕ್ಷರಾಭ್ಯಾಸದ ಪ್ರಯುಕ್ತ ಸರಸ್ವತಿ ಪೂಜೆ ಏರ್ಪಡಿಸಿ, ಎಲ್ಲಾ ಮಕ್ಕಳೂ ಅಕ್ಕಿಯಲ್ಲಿ ಅಕ್ಷರ ಬರೆಯುವ ಅಭ್ಯಾಸ ಆರಂಭಿಸಲಾಯಿತು. ಮಕ್ಕಳೊಂದಿಗೆ ಅವರ ಪೋಷಕರೂ ಈ ಸಂಭ್ರಮದಲ್ಲಿ ಭಾಗಿಯಾಗಿದ್ದರು. ಇದರ ಅಂಗವಾಗಿ ನಡೆದ ಸಮಾರಂಭದಲ್ಲಿ ಜಿಲ್ಲಾ ಕುಂಚಿಟಿಗ ಒಕ್ಕಲಿಗರ ವಿದ್ಯಾಭಿವೃದ್ಧಿ ಸಂಘದ ಅಧ್ಯಕ್ಷ ಡಾ.ಕೆ.ಶ್ರೀಧರ್ ಮಾತನಾಡಿ, ಶ್ರೀರಂಗ ವಿದ್ಯಾಭಿವೃದ್ಧಿ ಶಾಲೆಯಲ್ಲಿ ಹತ್ತನೇ ತರಗತಿವರೆಗೆ ಮಕ್ಕಳಿದ್ದು, ಸುಸಜ್ಜಿತ ಕಟ್ಟಡ, ವಿಶಾಲ ಆಟದ ಮೈದಾನ, ಪರಿಣಿತ ಶಿಕ್ಷಕರು ಇದ್ದು ಗುಣ ಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಪಠ್ಯದ ಜೊತೆಗೆ ಕ್ರೀಡೆ, ಯೋಗ, ಸಂಗೀತ, ನೃತ್ಯ ಮುಂತಾದ ಚಟುವಟಿಕೆಗಳನ್ನು ನಿರಂತರವಾಗಿ ಮಕ್ಕಳಿಗೆ ಕಲಿಸಲಾಗುತ್ತದೆ ಎಂದು ಹೇಳಿದರು.

ಶಾಲೆಯಲ್ಲಿ ಕನ್ನಡ ಮಾಧ್ಯಮದ ಜೊತೆಗೆ ಇಂಗ್ಲೀಷ್ ಮಾಧ್ಯಮ ಕಲಿಕೆ, ಉತ್ತಮ ಗ್ರಂಥಾಲಯ, ಶಾಲಾ ಬಸ್ ವ್ಯವಸ್ಥೆ ಇದೆ ಉತ್ತಮ ಬೋಧನೆ ಜೊತೆಗೆ ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಲಾಗಿದೆ ಎಂದು ಡಾ.ಶ್ರೀಧರ್ ಹೇಳಿದರು.

ಶಾಲಾ ಸಮಿತಿ ಅಧ್ಯಕ್ಷ ಎಸ್.ಕೆ. ನಾಗರಾಜು, ಜಿಲ್ಲಾ ಕುಂಚಿಟಿಗ ಒಕ್ಕಲಿಗರ ವಿದ್ಯಾಭಿವೃದ್ಧಿ ಸಂಘದ ಕಾರ್ಯದರ್ಶಿ ಎಸ್.ಕೆ. ನಾಗರಾಜು, ಖಜಾಂಚಿ ಭಕ್ತರಹಳ್ಳಿ ದೇವರಾಜು, ಮುಖಂಡರಾದ ಅಶೋಕ್ ಕಾರ್ಪೆಹಳ್ಳಿ, ಮುತ್ತರಾಯಪ್ಪ, ಮುಖ್ಯ ಶಿಕ್ಷಕಿ ಜಯಮ್ಮ ಹಾಗೂ ಸಂಘದ ನಿರ್ದೇಕರು, ಶಾಲೆಯ ಶಿಕ್ಷಕರು, ಪೋಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜೆಡಿಎಸ್ ಕಚೇರಿಯಲ್ಲಿ ಪಕ್ಷದ ಶ್ರೇಯಸ್ಸಿಗಾಗಿ ಹೋಮ, ಪೂಜೆ ಅಧಿಕಾರ ಇಲ್ಲದಿದ್ದರೂ ಜನರ ಜೊತೆ ಇರುತ್ತೇನೆ: ಹೆಚ್.ನಿಂಗಪ್ಪ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು:ಜೆಡಿಎಸ್ ವರಿಷ್ಠರೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರಿಗೆಆರೋಗ್ಯ, ಶ್ರೇಯಸ್ಸು ದೊರೆಯಲಿ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿಯವರು 2028ಕ್ಕೆ ರಾಜ್ಯದ ಮುಖ್ಯಮಂತ್ರಿಯಾಗಲಿ, ಜೆಡಿಎಸ್ ಪಕ್ಷ ಬಲವರ್ಧನೆಯಾಗಲಿ ಎಂದು ಪ್ರಾರ್ಥಿಸಲು ಶುಕ್ರವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ವಿಶೇಷ ಹೋಮ ಹವನ, ಪೂಜೆ ಪುನಸ್ಕಾರಗಳನ್ನು ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್.ನಿಂಗಪ್ಪ ಅವರ ಹುಟ್ಟುಹಬ್ಬ ಹಾಗೂ ಅವರ ವಿವಾಹ ವಾರ್ಷಿಕೋತ್ಸವದ ಪ್ರಯುಕ್ತ ಹೆಚ್.ನಿಂಗಪ್ಪ ಹಾಗೂ ಅವರ ಪತ್ನಿಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯೆ ಲಲಿತಾಅವರನ್ನು ಪಕ್ಷದ ಮುಖಂಡರು, ಕಾರ್ಯಕರ್ತರು ಸನ್ಮಾನಿಸಿ ಶುಭಕೋರಿದರು.ಗ್ರಾಮಾಂತರ ಶಾಸಕ, ಬಿಜೆಪಿ ನಾಯಕ ಬಿ.ಸುರೇಶ್‌ಗೌಡ, ಮಾಜಿ ಶಾಸಕರಾದ ಕೆ.ಎಂ.ತಿಮ್ಮರಾಯಪ್ಪ, ಸುಧಾಕರ ಲಾಲ್, ಮಾಜಿ ಜಿಲ್ಲಾಧ್ಯಕ್ಷ ಆರ್.ಸಿ.ಆಂಜನಪ್ಪ, ತುಮುಲ್ ನಿರ್ದೇಶಕ ಎಸ್.ಆರ್. ಗೌಡ, ಮುಖಂಡರಾದ ಗುಬ್ಬಿ ನಾಗರಾಜು, ಉಗ್ರೇಶ್ ಮೊದಲಾದವರು ಹೆಚ್.ನಿಂಗಪ್ಪದಂಪತಿಗೆ ಶುಭಾಶಯ ಸಲ್ಲಿಸಿದರು. ಜೆಡಿಎಸ್ ಕಚೇರಿಯಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಬೆಳಗಿನಿಂದ ಗಣ ಹೋಮ, ಸುದರ್ಶನ ಹೋಮ, ವಾಸ್ತು ಹೋಮ ಹಾಗೂ ಪೂರ್ಣಾಹುತಿ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನೆರವೇರಿದವು. ಜಿಲ್ಲೆಯಾದ್ಯಂತ



ಪಕ್ಷದ ಸಾವಿರಾರು ಕಾರ್ಯಕರ್ತರು ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಹೆಚ್.ನಿಂಗಪ್ಪ, ವಕೀಲ ವೃತ್ತಿ ಮಾಡುತ್ತಿದ್ದ ತಾವು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಸಾರ್ವಜನಿಕ ಜೀವನಕ್ಕೆ ಬಂದು 45 ವರ್ಷವಾಯಿತು. ಜಿಲ್ಲಾ ಪಂಚಾಯ್ತಿ ಸದಸ್ಯನಾಗಿ, ಒಮ್ಮೆ ಶಾಸಕನಾಗಿದ್ದೆ. ಆದರೆ ರಾಜಕೀಯವಾಗಿ ಹೇಳಿ ಕೊಳ್ಳುವಂತಹ ಏಳಿಗೆ ತಮಗೆ ಆಗಲಿಲ್ಲ ಎಂಬ ನೋವು ಇದೆ. ಆದೇನೇ ಆಗಲಿ, ಅಧಿಕಾರ ಇರಲಿ, ಬಿಡಲಿ ಕೊನೆ ವರೆಗೂ ನಾನು ಜನರೊಂದಿಗೆ ಇರುತ್ತೇನೆ ಎಂದು ಹೇಳಿದರು.

ಈ ಹಿಂದೆ ಜಿಲ್ಲಾಧ್ಯಕ್ಷನಾಗಿದ್ದಾಗ ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳ ಪೈಕಿ ತಾವೂ ಸೇರಿ 9ರಲ್ಲಿ ಜೆಡಿಎಸ್ ಶಾಸಕರು ಗೆದ್ದರು, ಆ ಅವಧಿಯಲ್ಲಿ ಹೆಚ್.ಡಿ.ಕುಮಾರಸ್ವಾಮಿ ಯವರು ಮುಖ್ಯಮಂತ್ರಿಯಾದರು, ಆಗ ಜನರಿಗೆ ಒಳ್ಳೆಯ ಕೆಲಸಗಳನ್ನು ಮಾಡಲು ಸಾಧ್ಯವಾಯಿತು. ತಮ್ಮ ಅವಧಿಯಲ್ಲಿ ಕ್ಷೇತ್ರದಲ್ಲಿ ಹಲವಾರು ಆಸ್ಪತ್ರೆ, ಹೈಸ್ಕೂಲ್, ವಿದ್ಯುತ್ ಉಪ ಸ್ಥಾವರಗಳನ್ನು ಸ್ಥಾಪನೆ ಮಾಡಲಾಯಿತು. ಒಂದಲ್ಲಾ ಒಂದು ರೀತಿಯಲ್ಲಿ ಕ್ಷೇತ್ರದ ಎಲ್ಲಾ ಹಳ್ಳಿಗಳಲ್ಲೂ ತಮ್ಮ ಆವಧಿಯಲ್ಲಿ ಮಾಡಿದ ಕೆಲಸಗಳ ಗುರುತುಇದೆಎಂದು ಹೆಚ್.ನಿಂಗಪ್ಪ ಹೇಳಿದರು. ಈಗಿನ ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳನ್ನು ಕೊಟ್ಟು ಜನರ ಮೇಲೆ ತೆರಿಗೆ ಹೇರಿದೆ. ಯಾವುದೇ ಅಭಿವೃದ್ಧಿ ಕೆಲಸ ಆಗುತ್ತಿಲ್ಲ. ರಾಜ್ಯದ ಜನ ಸರ್ಕಾರದ ವಿರುದ್ಧ ಬೇಸತ್ತಿದ್ದಾರೆ. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲು ಕಟ್ಟಿಟ್ಟ ಬುತ್ತಿ. ಕಾಂಗ್ರೆಸ್ ಸರ್ಕಾರದ ವೈಫಲ್ಯದ ನಡುವೆ ಜನ ಜೆಡಿಎಸ್ ಬಗ್ಗೆ ನಿರೀಕ್ಷೆ ಇಟ್ಟು ಕೊಂಡಿದ್ದಾರೆ. ಪಕ್ಷದ ಪ್ರತಿಯೊಬ್ಬರೂ ಶ್ರಮ ವಹಿಸಿ ಪಕ್ಷವನ್ನು ಸದೃಢವಾಗಿ ಸಂಘಟಿಸಿ ಮುಂದೆ ಅಧಿಕಾರಕ್ಕೆ ತರಲು ಕಾಳಜಿ ವಹಿಸಬೇಕು ಎಂದು ಹೇಳಿದರು.

ಇದರ ಅಂಗವಾಗಿ ನಗರ ಮಹಾ ಪ್ರಧಾನ ಕಾರ್ಯದರ್ಶಿ ಟಿ.ಸಿ.ಪ್ರಭಾಕರ್ ಎಲ್ಲಾ ಕಾರ್ಯಕರ್ತರಿಗೂ ಊಟದ ವ್ಯವಸ್ಥೆ ಮಾಡಿದ್ದರು.

ಜಿಲ್ಲಾ ಜೆಡಿಎಸ್ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ಹಿರಿಯ ಮುಖಂಡರಾದ ಟಿ.ಎಲ್. ಕುಂಭಯ್ಯ, ಗಂಗಣ್ಣ, ನಗರಅಧ್ಯಕ್ಷ ಟಿ.ಹೆಚ್. ಜಯರಾಮ್, ಕಾರ್ಯಾಧ್ಯಕ್ಷ ಟಿ.ಸಿ.ಮೋಹನ್ ಕುಮಾರ್, ನಗರ ಮಹಾ ಪ್ರಧಾನ ಕಾರ್ಯದರ್ಶಿ ಟಿ.ಸಿ. ಪ್ರಭಾಕರ್, ರಾಜ್ಯ ಎಸ್ಟಿ ಘಟಕ ಉಪಾಧ್ಯಕ್ಷ ಸೋಲಾರ್‌ಕೃಷ್ಣಮೂರ್ತಿ, ನಗರಸಭೆ ಮಾಜಿ ಉಪಧ್ಯಕ್ಷ ಶ್ರೀನಿವಾಸ್ ಪ್ರಸಾದ್, ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಧರಣೇಂದ್ರ ಕುಮಾರ್, ಟಿ.ಎ. ಬಾಲಕೃಷ್ಣ, ಶ್ರೀನಿವಾಸ್, ಲಕ್ಷ್ಮೀನರಸಿಂಹರಾಜು, ಟಿ.ಹೆಚ್. ಬಾಲಕೃಷ್ಣ, ಜಿಲ್ಲಾ ಮಹಿಳಾ ಘಟಕ ಅಧ್ಯಕ್ಷೆ ರೇಖಾರಾಜ್, ನಗರ ಅಧ್ಯಕ್ಷೆ ಲಕ್ಷ್ಮೀ ನಾಯಕ್, ಜಿಲ್ಲಾರೈತ ಸಂಘದ ಅಧ್ಯಕ್ಷ ರಂಗನಾಥ್, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಕೆಂಪರಾಜು, ನಗರ ಯುವ ಅಧ್ಯಕ್ಷ ಪ್ರಮೋದ್ ಗೌಡ, ತಾಲ್ಲೂಕು ಅಧ್ಯಕ್ಷ ನಾಗವಲ್ಲಿ ರಾಮು, ಮುಖಂಡರಾದ ಯೋಗಾನಂದ ಕುಮಾರ್, ಉಪ್ಪಾರಹಳ್ಳಿ ಕುಮಾರ್, ನವೀನ್ ಗೌಡ, ಬೆಳಗುಂಬ ವೆಂಕಟೇಶ್, ಭೈರೇಶ್, ದರ್ಶನ್ ಸೇರಿದಂತೆ ಹಲವಾರು ಮುಖಂಡರು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಮಕ್ಕಳ ಶಿಕ್ಷಣ ಬಡತನ ನಿರ್ಮೂಲನೆಗೆ ಪ್ರಮುಖ ಸಾಧನ – ನ್ಯಾ. ಬಿ. ಜಯಂತ್ ಕುಮಾರ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು; ಮಕ್ಕಳ ಶಿಕ್ಷಣ ಬಡತನ ನಿರ್ಮೂಲನೆಗೆ ಪ್ರಮುಖ ಸಾಧನವಾಗಿದ್ದು, ಮಕ್ಕಳನ್ನು ಶಾಲೆಗೆ ಕಳುಹಿಸಲು ಪ್ರೋತ್ಸಾಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ. ಜಯಂತ್ ಕುಮಾರ ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ವತಿಯಿಂದ ಶುಕ್ರವಾರ ನಗರದ ಬಾಲಭವನದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆಯುವ ಮಕ್ಕಳು ಜೀವನದ ಮೂಲಭೂತ ಪಾಠಗಳನ್ನು ಕಲಿಯುತ್ತಾರೆ ಎಂದು ಹೇಳಿದರು.

ಮಕ್ಕಳನ್ನು ಕೆಲಸಕ್ಕೆ ಇಡುವುದು ಕಾನೂನುಬಾಹಿರವಾಗಿದ್ದು, ಇದರಿಂದ ಅವರ ಭವಿಷ್ಯ ಹಾನಿಯಾಗುತ್ತದೆ. ಆದ್ದರಿಂದ ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಕರೆ ನೀಡಿದರು.ಮಕ್ಕಳಿಗೆ ಕಾನೂನು ಅರಿವು ಮೂಡಿಸುವುದು ಅತ್ಯವಶ್ಯಕವಾಗಿದ್ದು, ಯಾರಾದರೂ ಬಾಲಕಾರ್ಮಿಕರನ್ನು ಕಂಡರೆ ತಕ್ಷಣ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬೇಕು. ಇದರಿಂದ ಮಕ್ಕಳ ಭವಿಷ್ಯವನ್ನು ರಕ್ಷಿಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು. ಕುಟುಂಬದ ಆರ್ಥಿಕ ಸಂಕಷ್ಟವನ್ನು ನೆಪವನ್ನಾಗಿ ಮಾಡಿಕೊಂಡು ಮಕ್ಕಳನ್ನು ಕೆಲಸಕ್ಕೆ ಇಡುವುದು ಸರಿಯಲ್ಲ, ಸರ್ಕಾರ ನೀಡುವ ಸೌಲಭ್ಯಗಳನ್ನು ಬಳಸಿಕೊಂಡು ಮಕ್ಕಳಿಗೆ ಶಿಕ್ಷಣ ನೀಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಗೋಪಾಲ್ ಅವರು, ಇಂದಿನ ಮಕ್ಕಳು ನಾಳೆಯ ಪ್ರಜೆಗಳಾಗಿದ್ದು, ಅವರ ಹಕ್ಕುಗಳನ್ನು ಕಾಪಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದರು. ಬಾಲಕಾರ್ಮಿಕರನ್ನು ದುರುಪಯೋಗಪಡಿಸಿಕೊಂಡರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರಾದ ಲೋಕೇಶ್ ಧನಪಾಲ ಹವಲೆ ಪ್ರತಿಜ್ಞಾವಿಧಿ ಬೋಧಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಸಿದ್ದರಾಮಣ್ಣ ಎಸ್., ಕಾರ್ಮಿಕ ಇಲಾಖೆ ಅಧಿಕಾರಿಗಳಾದ ಪೈರಾಜ್ ಪಾಷ, ಇಬ್ರಾಹಿಂ ಹಾಗೂ ಬಾಲಕಾರ್ಮಿಕ ಯೋಜನಾ ನಿರ್ದೇಶಕರು ರವಿಕುಮಾರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಕಟ್ಟಡ ಕಾರ್ಮಿಕರು ಮತ್ತಿತರರು ಇದ್ದರು.

ಇದಕ್ಕೂ ಮುನ್ನ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯಿಂದ ನಗರದ ಬಾಲಭವನದ ಸಭಾಂಗಣದವರೆಗೆ ಜಾಥಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಪೂರ್ಣಪ್ರಜ್ಞಾ ಆಂಗ್ಲ ಶಾಲೆಯಲ್ಲಿ ಅಕ್ಷರಾಭ್ಯಾಸ ಕಾರ್ಯಕ್ರಮ

ನಾಗವಲ್ಲಿ ಪೂರ್ಣಪ್ರಜ್ಞಾ ಆಂಗ್ಲ ಶಾಲೆಯಲ್ಲಿ 12–06–2026 ರಂದು ಬೆಳಿಗ್ಗೆ 9:30 ಗಂಟೆಗೆ ಅಕ್ಷರಾಭ್ಯಾಸ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಹಾಗೂ ಸಂಭ್ರಮದಿಂದ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿ ಗಳಾದ ಗೆ ಹೊನ್ನಪ್ಪ ರವರು ಅಧ್ಯಕ್ಷರಾದ ಶ್ರೀಮತಿ ಸರ್ವ ಮಂಗಳ ರವರು ಮುಖ್ಯ ಶಿಕ್ಷಕರು, ಶಿಕ್ಷಕ ವೃಂದ, ಪೋಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಗಣಪತಿ ಪೂಜೆ ನೆರವೇರಿಸಿ, ಪುಟಾಣಿ ಮಕ್ಕಳಿಗೆ ಅಕ್ಕಿಯ ತಟ್ಟೆಯಲ್ಲಿ "ಓಂ" ಹಾಗೂ ಕನ್ನಡ ಅಕ್ಷರಗಳನ್ನು ಬರೆಯಿಸುವ ಮೂಲಕ



ಅಕ್ಷರಾಭ್ಯಾಸ ಮಾಡಿಸಲಾಯಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಚರಣ್ ರಾಜ್ ರವರು ಮಕ್ಕಳಿಗೆ ಶಿಕ್ಷಣದ ಮಹತ್ವವನ್ನು ತಿಳಿಸಿ ಶುಭ ಹಾರೈಸಿದರು.

ಶಾಲೆಯ ಮುಖ್ಯ ಶಿಕ್ಷಕರಾದ ಮೋಹನ್ ರವರು ಮಾತನಾಡಿ, ಮಕ್ಕಳ ಜೀವನದಲ್ಲಿ ಅಕ್ಷರಾಭ್ಯಾಸವು ಮಹತ್ವದ ಹಂತವಾಗಿದ್ದು, ಶಿಕ್ಷಣದ ಮೊದಲ ಹೆಜ್ಜೆಯಾಗಿದೆ ಎಂದು ತಿಳಿಸಿದರು. ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಸಿಹಿ ವಿತರಿಸಿ ಶುಭ ಹಾರೈಸಲಾಯಿತು. ಪೋಷಕರು ಹಾಗೂ ಸಾರ್ವಜನಿಕರು ಕಾರ್ಯಕ್ರಮವನ್ನು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಷ್ಟ್ರಪತಿ, ಉಪ ರಾಷ್ಟ್ರಪತಿಯವರನ್ನು ಭೇಟಿ ಮಾಡಿದ ಸಿಎಂ ಡಿಕೆಶಿ

ಬೆಂಗಳೂರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿಂದು ರಾಷ್ಟ್ರಪತಿ ಹಾಗೂ ಉಪ ರಾಷ್ಟ್ರಪತಿಯವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದ್ದಾರೆ. ಬೆಳಗ್ಗೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಡಿ.ಕೆ.ಶಿವ ಕುಮಾರ್ ಭೇಟಿ ಮಾಡಿದ್ದರು.

ನಂತರ ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣಾ ಅವರನ್ನು ಭೇಟಿ ಮಾಡಿದ್ದಾರೆ.ಕಳೆದ ಮೂರು ದಿನಗಳಿಂದಲೂ ದೆಹಲಿಯಲ್ಲೆ ಇರುವ ಮುಖ್ಯಮಂತ್ರಿಯವರು, ನಿನ್ನೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದರು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿದ್ದರು.

ಅದಕ್ಕೂ ಮುನ್ನ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಲೋಕ ಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕ ಗಾಂಧಿಯವರನ್ನು ಭೇಟಿ ಮಾಡಿದ್ದರು. ದೆಹಲಿಯಲ್ಲಿ ಅಖಿಲ ಭಾರತ ಕಾಂಗ್ರೆಸ್‌ನ ಯುವ ಮಹಿಳಾ ಹಾಗೂ ವಿದ್ಯಾರ್ಥಿ ಘಟಕಗಳಿಗೆ ಭೇಟಿ ನೀಡಿ, ಡಿ.ಕೆ.ಶಿವಕುಮಾರ್ ಚರ್ಚೆ ನಡೆಸಿದರು. ದೆಹಲಿಯಲ್ಲಿ ಪ್ರಮುಖ ನಾಯಕರು ಹಾಗೂ ಕೇಂದ್ರ ಸಚಿವರ ಜೊತೆ ಸಭೆಗಳ ಮೂಲಕ ಡಿ.ಕೆ.ಶಿವಕುಮಾರ್ ರಾಜ್ಯದ ಅಭಿವೃದ್ಧಿಗೆ ಭದ್ರ ಬುನಾದಿಯ ಸಿದ್ಧತೆಯಲ್ಲಿದ್ದಾರೆ.

ಮಹಿಳೆಯರ ಕೃಷಿ ತರಬೇತಿ ಆಯೋಜನೆ :– ಡಾ ಕಲ್ಪನಾ ಚಾಲನೆ

ತುಮಕೂರು:– ಕೃಷಿ ವಿಶ್ವವಿದ್ಯಾಲಯ ಬೆಂಗಳೂರು ಹಾಗೂ ಅಖಿಲ ಭಾರತ ಸುಸಂಘಟಿತ ಸಂಶೋಧನಾ ಯೋಜನೆ – ಕೃಷಿನಿರತ ಮಹಿಳೆಯರ ತರಬೇತಿ ಕಾರ್ಯಕ್ರಮವನ್ನು (ಜಿಕೆವಿಕೆ) ಆಯೋಜನೆ ಮಾಡಲಾಗಿದ್ದು ಎಲ್ಲಾ ರೈತ ಮಹಿಳೆಯರು ಸದುಪಯೋಗ ಪಡೆದುಕೊಳ್ಳಿ ಹಾಗೂ ರೈತರು ಬೆಳೆಯುವಂತಹ ಧಾನ್ಯದಿಂದ ವಿವಿಧ ರೀತಿಯ ತಿಂಡಿ ತಿನಿಸುಗಳನ್ನು ತಯಾರಿಸುವ ವಿಧಾನವನ್ನು ತಿಳಿಸಲಾಯಿತು.ಜಿಲ್ಲೆಯ ಗಡಿ ಗ್ರಾಮವಾದ ಗುಬ್ಬಿ ಮತ್ತು ಕುಣಿಗಲ್ ತಾಲೂಕಿನ ಶೆಟ್ಟಿಬೀಡು ಗ್ರಾಮದಲ್ಲಿ ಶ್ರೀ ಲಕ್ಷ್ಮಿ ಕೃಷಿ ಮಹಿಳಾ ಸಂಘ ಹಾಗೂ ಜಾನಪದ ಕಲಾ ತಂಡದೊಂದಿಗೆ ಕೃಷಿ ತರಬೇತಿ ಕಾರ್ಯಾಗಾರವನ್ನು ಆಯೋಜನೆ ಮಾಡಲಾಗಿದ್ದು ಈ ಭಾಗದ ಸುತ್ತಮುತ್ತಲಿನ ರೈತ ಮಹಿಳೆಯರಿಗೆ ತರಬೇತಿಯಿಂದ ಅನುಕೂಲವಾಗುತ್ತದೆ ಎಂದು ಡಾ!! ಕಲ್ಪನಾ ತಿಳಿಸಿದರು.ಶ್ರೀ ಲಕ್ಷ್ಮಿ ಕೃಷಿ ಮಹಿಳಾ ಸಂಘದ ಅಧ್ಯಕ್ಷೆ ಮಂಗಳ ಗೌರಿ ಮಾತನಾಡಿ ರೈತಾಪಿ ವರ್ಗದಿಂದ ಬೆಳೆಯುವಂತಹ ರಾಗಿ. ಭತ್ತ.



ಹುಣಸೆಹಣ್ಣಿನ ಸಂಸ್ಕರಣೆ ಬಗ್ಗೆ ಹಾಗೂ ದವಸ ಧಾನ್ಯಗಳಿಂದ ಯಾವ ಯಾವ ವಿಧಾನಗಳಲ್ಲಿ ವಿವಿಧ ರೀತಿಯ ಪದಾರ್ಥಗಳನ್ನು ತಯಾರಿಸಬಹುದು ಎಂಬುವುದರ ಬಗ್ಗೆ ವಿಧವಿಧವಾಗಿ ಜಿಕೆವಿಕೆ ಅಧಿಕಾರಿಗಳು ಆಗಮಿಸಿ ಗ್ರಾಮೀಣ ಭಾಗದ ಮಹಿಳೆಯರಿಗೆ ತಿಳಿಸಿದ್ದರು ಅದೇ ರೀತಿ ಇದನ್ನು ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಮಹಿಳೆಯರು ತಿಳಿದುಕೊಂಡು ಸಭೆಪಯೋಗ ಪಡೆದು ಕೊಳ್ಳಬೇಕು ಎಂದರು.

ಶೆಟ್ಟಿಬೀಡು ಗ್ರಾಮ ಗುಬ್ಬಿ ಮತ್ತು ಕುಣಿಗಲ್ ಎರಡು ತಾಲೂಕಿನ ಗಡಿಭಾಗದಲ್ಲಿದ್ದು ಸುತ್ತಮುತ್ತಲಿನ ಗ್ರಾಮಸ್ಥರು ಕೃಷಿಯಿಂದ ಬೆಳೆಯುವಂತಹ ದವಸ ಧಾನ್ಯಗಳ ಬಗ್ಗೆ ತಿಳಿದುಕೊಳ್ಳಲು ಭಾಗವಹಿಸಿದ್ದರು.

ಉಪಾಧ್ಯಕ್ಷೆ ಪುಟ್ಟ ಲಕ್ಷ್ಮಮ್ಮ ಮಾತನಾಡಿ ರೈತರು ಬೆಳೆಯುವಂತಹ ದವಸ ಧಾನ್ಯಗಳಲ್ಲಿ ವಿವಿಧ ರೀತಿಯ ತಿಂಡಿ ತಿನಿಸುಗಳನ್ನು ತಯಾರಿಸುವ ಮಾರ್ಗಸೂಚಿಯನ್ನು ಕೃಷಿ ವಿಶ್ವವಿದ್ಯಾಲಯ ಅಧಿಕಾರಿಗಳು (ಜಿಕೆವಿಕೆ) ತಿಳಿಸಿಕೊಟ್ಟಿದ್ದಾರೆ ಕಾರ್ಯಕ್ರಮಕ್ಕೆ ನೆರೆದಿರುವಂತಹ ಎಲ್ಲಾ ಮಹಿಳೆಯರು ಈ ತರಬೇತಿ ಕಾರ್ಯಕ್ರಮವನ್ನು ಮತ್ತೊಬ್ಬರಿಗೆ ತಿಳಿಸುವ ಮೂಲಕ ಪರಿಚಯಿಸಬೇಕು ಎಂದರು.ಇದೇ ಸಂದರ್ಭದಲ್ಲಿ ರೈತ ಮಹಿಳೆಯರು ಮತ್ತು ಗ್ರಾಮಸ್ಥರು ಹಾಗೂ ನೇತ್ರಾವತಿ. ಶಿವಮ್ಮ.ನರಸಿಂಹಣ್ಣ .ಗೌರಮ್ಮ. ತಿಮ್ಮನೆಯಪ್ಪ ಉಪಸ್ಥಿತರಿದ್ದರು ಹಾಜರಿದ್ದರು

SIR ನೆಪದಲ್ಲಿ ಮತದಾನದ ಹಕ್ಕು ಕಸಿಯುವ ಹುನ್ನಾರ ಸಿಪಿಐ(ಎಂ) ಆಗ್ರಹ

ಸೂರ್ಯಪ್ರಗತಿನ್ಯೂಸ್.ಕಾಂ



ಭಾರತ ಚುನಾವಣಾ ಆಯೋಗವು ವಿಶೇಷ ಸಮಗ್ರ ಪರಿಷ್ಕರಣೆ (SIR) ಹೆಸರಿನಲ್ಲಿ ಕೈಗೊಂಡಿರುವ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ಲಕ್ಷಾಂತರ ಬಡವರು, ಕಾರ್ಮಿಕರು, ಮಹಿಳೆಯರು, ದಲಿತರು, ಆದಿವಾಸಿಗಳು ಹಾಗೂ ಅಲ್ಪಸಂಖ್ಯಾತ ಸಮುದಾಯದ ಜನರನ್ನು ಮತದಾನದ ಹಕ್ಕಿನಿಂದ ವಂಚಿಸುವ ಅಪಾಯವನ್ನು ಸೃಷ್ಟಿಸಿದೆ. ಇದು ಸಾರ್ವತ್ರಿಕ ಮತದಾನದ ಸಂವಿಧಾನಿಕ ಹಕ್ಕಿನ ಮೇಲಿನ ಗಂಭೀರ ದಾಳಿಯಾಗಿದೆ. ಈ ಸಂಬಂದ ದಿನಾಂಕ;12–06–2026 ರಂದು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಸಿಪಿಐ(ಎಂ) ನಿಯೋಗ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು. ಚುನಾವಣಾ ಆಯೋಗ ನಿಗದಿಪಡಿಸಿರುವ 11 ದಾಖಲೆಗಳ ಪೈಕಿ ಒಂದು ದಾಖಲೆಯನ್ನೂ ಒದಗಿಸಲು ಸಾಧ್ಯವಿಲ್ಲವೋ ಅಂತಹವರಿಗೆ, ಜನನ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ಖಾಯಂ ವಾಸ ದೃಢೀಕರಣ ಪತ್ರ, ಇತ್ಯಾದಿ ಅಗತ್ಯ ದಾಖಲೆಗಳನ್ನು ಪಡೆದುಕೊಳ್ಳಲು ಸಾಧ್ಯವಾಗುವಂತೆ ನಿಯಮಗಳನ್ನು ಸರಳಗೊಳಿಸಿ, ಸುಲಭವಾಗಿ ಮತ್ತು ಶೀಘ್ರವಾಗಿ ದಾಖಲೆಗಳನ್ನು ರಾಜ್ಯ ಸರ್ಕಾರವೇ ಒದಗಿಸಲು ಕ್ರಮಗಳನ್ನು ತೆಗೆದುಕೊಳ್ಳಬೇಕು. ದಾಖಲೆಯಿಲ್ಲ ಎಂಬ ಕಾರಣಕ್ಕೆ ಆತಂಕಕ್ಕೆ ಒಳಗಾಗುವ ಜನರಲ್ಲಿ ವಿಶ್ವಾಸವನ್ನು ತುಂಬುವ ದೃಷ್ಟಿಯಿಂದ, ಮತದಾರರಿಗೆ ಆಗುವ ಅನಗತ್ಯ ವೆಚ್ಚ, ಸಮಯ, ತಾಪತ್ರಯಗಳನ್ನು ತಪ್ಪಿಸಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಲಾಯಿತು.

ದಾಖಲೆಗಳ ಕೊರತೆ ಅಥವಾ “ಲಾಜಿಕಲ್ ಡಿಸ್ಕ್ರೆಪೆನ್ಸಿ” ಎಂಬ ನೆಪದಲ್ಲಿ ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವ ಯಾವುದೇ ಕ್ರಮವನ್ನು ರಾಜ್ಯ ಸರ್ಕಾರ ಒಪ್ಪಬಾರದು. ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕನ್ನು ರಕ್ಷಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ.

ಆದ್ದರಿಂದ, ದಾಖಲೆಗಳಿಲ್ಲದವರಿಗೆ ಅಗತ್ಯ ಪ್ರಮಾಣಪತ್ರಗಳನ್ನು ತ್ವರಿತವಾಗಿ ಒದಗಿಸುವುದು, ಯಾವುದೇ ಅರ್ಹ ಮತದಾರರ ಹೆಸರನ್ನು ಅಳಿಸದಂತೆ ಚುನಾವಣಾ ಆಯೋಗದ ಮೇಲೆ ಒತ್ತಡ ಹೇರಿಸುವುದು ಹಾಗೂ ರಾಜ್ಯಾದ್ಯಂತ ಮತದಾರರ ಸೇವಾ ಕೇಂದ್ರಗಳನ್ನು ಜನಸಮಾನ್ಯರ ಸಿಗುವ ಸಮಯಕ್ಕೆ ಕೇಂದ್ರಗಳು ಗ್ರಾಮಪಂಚಾಯಿತಿ ಮಟ್ಟದಲ್ಲಿ ತೆರೆಯುವಂತೆ ಸಿಪಿಐ(ಎಂ) ರಾಜ್ಯ ಸರ್ಕಾರವನ್ನು ಬಲವಾಗಿ ಆಗ್ರಹಿಸುತ್ತದೆ.

ನಿಯೋಗದಲ್ಲಿ ಜಿಲ್ಲಾ ಕಾರ್ಯದರ್ಶಿ ಎನ್. ಕೆ.ಸುಬ್ರಮಣ್ಯ,ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಪ್ರಾಧನ ಕಾರ್ಯಧರ್ಶಿ ಬಿ.ಉಮೇಶ್.ಪುಟ್ಟಾಪ್ ವ್ಯಾಪಾರಿಗಳ ಸಂಘದ ಮುಖಂಡ ವಾಸೀಂ, ಸಿಪಿಐ(ಎಂ)ನ ಲಕ್ಷ್ಮೀಕಾಂತ್, ಮಧುಸೂದನ್, ಉದಯ ಕುಮಾರ, ಗೋಪಾಲಕೃಷ್ಣ ಮುಂತಾದವರು ಭಾಗವಹಿಸಿದ್ದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಮಾಸ್ತಿಯವರ ಜನ್ಮದಿನ ಕಾರ್ಯಕ್ರಮ



ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ಪ್ರಗತಿಪರ ಚಿಂತಕ, ಕೈಗಾರಿಕೆಗಳ ಜನಕ – ನಾಲ್ವಡಿ ಕೃಷ್ಣರಾಜ ಒಡೆಯರ ಆಡಳಿತಾತ್ಮಕ ರೀತಿ ಮೈಸೂರು ಸಂಸ್ಥಾನ ಸುವರ್ಣಯುಗವಾಗಿತ್ತು ಎಂದು ನಿವೃತ್ತ ಪ್ರಾಂಶುಪಾಲ ಸಿ.ಕೃಷ್ಣಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಅಚಲ ಕಲ್ಚರಲ್ ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಮಾಸ್ತಿಯವರ ಜನ್ಮದಿನ ಕಾರ್ಯಕ್ರಮ ದಲ್ಲಿ ಮಾತನಾಡಿ,ಮಹಿಳೆಯರ ವಿದ್ಯಾಭ್ಯಾಸಕ್ಕೆ ಮಹತ್ವ ನೀಡಿದರಲ್ಲದೆ ವಿಧವಾವಿವಾಹಕ್ಕೆ ಪ್ರೋತ್ಸಾಹ ದೇವದಾಸಿ ಪದ್ಧತಿ ,ಬಾಲ್ಯವಿವಾಹ ದಂತ ಅನಿಷ್ಟ ಪದ್ಧತಿ ನಿವಾರಣೆ ಗಾಗಿ ಕಾನೂನು ಜಾರಿಗೊಳಿಸಿದರು ಎಂದರು.

ಮಧುಗಿರಿ ಹೆಸರು ಬರಲು ಕಾರಣ ರಾದ ಮಾಸ್ತಿ ಅವರ ವ್ಯಕ್ತಿತ್ವ ಸಾಹಿತ್ಯ ಸಾಧನೆ ಕುರಿತು ಸಾಹಿತಿ ಮ.ಲ.ನ.ಮೂರ್ತಿ ಮಾತನಾಡಿದರು.

ವಕೀಲರಾದ ಬಿ.ನರಸಿಂಹಮೂರ್ತಿ ಮಾತನಾಡಿ,ಸಮಾಜ ಪರಿವರ್ತನೆಗಾಗಿ ನಾಲ್ವಡಿಯವರು ತಂದ ಹೊಸ ಕಾನೂನು ಪರಿಚಯಿಸಿದರು. ಅಚಲ ಫೌಂಡೇಶನ್ನಿನ ಅಧ್ಯಕ್ಷ ಪ್ರೊ.ಡಿ.ಎಸ್ ಮುನೀಂದ್ರ ಕುಮಾರ್ ಮಾತನಾಡಿ, ನಾಲ್ವಡಿಯವರು ಒಬ್ಬ ರಾಜನಾಗಿ ರಾಜಪ್ರಭುಭುತ್ವತ್ವದೊಳಗೆ ಪ್ರಜಾಪ್ರಭುತ್ವದ ಆಶಯಗಳನ್ನು ಮೈಗೂಡಿಸಿ ಕೊಂಡರು.ತಮ್ಮ ಯೋಚನೆ ಶಾಸನ ಪ್ರಯೋಗಗಳ ಮೂಲಕ ಗಟ್ಟಿಗೊಳಿಸಿದರು.ಅಸ್ಪೃಶ್ಯತೆ ತೊಡೆದುಹಾಕಲು ಮುಂದಾದರು.

ಪ್ರಾಂಶುಪಾಲರಾದ ವೇದಮೂರ್ತಿ ಮಾತನಾಡಿ, ಅಚಲ ಕಲ್ಚರಲ್ ಫೌಂಡೇಶನ್ನಿನ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಏಳ್ಗೆಗೆ ಸಹಕಾರಿ,ಮಾರ್ಗದರ್ಶಕ ಎಂದರು.

ವೀಣಾಶ್ರೀನಿವಾಸ್ ಕಾರ್ಯಕ್ರಮ ನಿರೂಪಿಸಿ,ಸ್ವರಚಿತ ಕವನ ವಾಚಿಸಿದರು. ಪುರವರ ಹೋಬಳಿ ಕ.ಸಾ.ಪ ಅಧ್ಯಕ್ಷ ಪಿ ಕೆ ರಂಗ ಸ್ವಾಮಿ ವಂದಿಸಿದರು

ಭಾರತೀಯ ಸಂಸ್ಕೃತಿಯನ್ನು ಅನಾವರಣ ಗೊಳಿಸುವ ಅಕ್ಷರಾಭ್ಯಾಸ

ತಾಲೂಕಿನ ದಬ್ಬೇಗಟ್ಟ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬಾಲ್ಯದಿಂದಲೇ ನಮ್ಮ ಭಾರತೀಯ ಸಂಸ್ಕೃತಿಯನ್ನುಅನಾವರಣಗೊಳಿಸುವ ಅಕ್ಷರಾಭ್ಯಾಸ ಅಥವಾ ವಿದ್ಯಾರಂಭ ಕಾರ್ಯಕ್ರಮವನ್ನು ನಡೆಸಲಾಯಿತು. 2026–27 ನೇ ಸಾಲಿಗೆ ಎಲ್. ಕೆ.ಜಿ. ಹಾಗೂ ಯುಕೆಜಿ ಮತ್ತು ಒಂದನೇ ತರಗತಿಯ ಹೊಸದಾಗಿ ದಾಖಲಾತಿ ಪಡೆದ 60 ವಿಧ್ಯಾರ್ಥಿಗಳಿಗೆ ಪೋಷಕರೊಂದಿಗೆ ಶಾಸ್ತ್ರೋಕ್ತವಾಗಿ ಅಕ್ಷರಭ್ಯಾಸ ನಡೆಸಲಾಯಿತು. ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಿದರು. ಗ್ರಾಮೀಣ ಭಾಗದ ಈ ಶಾಲೆಯಲ್ಲಿ ಯಾವ ಖಾಸಗಿ ಶಾಲೆಗೆ ಕಡಿಮೆಯಿಲ್ಲದಂತೆ ಬಹುತೇಕ ಎಲ್ಲಾ ಕಾರ್ಯಕ್ರಮಗಳನ್ನು ನಡೆಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಗಂಗಾಧರಯ್ಯ, ಮೀನಾಕ್ಷಿ, ದಿನೇಶ್, ರಾಮೇಗೌಡ, ಮಂಜುಳ, ಗಿರಿಜಮ್ಮ, ಪೂರ್ಣಿಮ, ಗುರುಪ್ರಸಾದ್, ಪ್ರದೀಪ್ ಕುಮಾರ್, ಹಾಗೂ ಎಸ್.ಡಿ.ಎಂ.ಸಿ ಸಮಿತಿಯ ಪದಾಧಿಕಾರಿಗಳು ಹಾಗೂ ಪೋಷಕರು, ಶಾಲಾ ಸಿಬ್ಬಂದಿ ವರ್ಗ, ಉಪಸ್ಥಿತರಿದ್ದರು.

ದಲಿತ ಚಳುವಳಿಯ ಹುಟ್ಟಿಗೆ ಕಾರಣರಾದ ಪ್ರೊಫೆಸರ್ ಬಿ.ಕೃಷ್ಣಪ್ಪನವರ ತತ್ವಾದರ್ಶಗಳನ್ನು ಸಂಘಟನೆಯ ಮುಖಂಡರು ಅಳವಡಿಸಿಕೊಳ್ಳಬೇಕು



ಸೂರ್ಯಪ್ರಗತಿನ್ಯೂಸ್.ಕಾಂ

ತುರುವೇಕೆರೆ:– ಪಟ್ಟಣದಲ್ಲಿ ನಡೆದ ಪ್ರೊಫೆಸರ್ ಬಿ.ಕೃಷ್ಣಪ್ಪನವರ 89ನೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸಂತೋಷ್ ಕಂಟ್ಲಿರವರು ಇಂದಿನ ಸಂಘಟನೆಯ ಮುಖಂಡರುಗಳು ಹಲವು ಬಣಗಳಾಗಿರುವುದು ಸಂಘಟನೆಗಳಲ್ಲಿ ಶಕ್ತಿ ಕುಂದುವಂತಾಗಿದೆ ಹಿಂದೆ ಬಿ.ಕೆ.ರವರ ಕಾಲದಲ್ಲಿ ದಲಿತ ಚಳವಳಿ ಎಂದರೆ ಸರ್ಕಾರವೇ ಬಿದ್ದುಹೋಗುತ್ತಿತ್ತು ಅಂತಹ ಗಟ್ಟಿ ನಿಲುವು ಸಂಘಟನೆಗಳಲ್ಲಿತ್ತು ಆದರೆ ತರುವಾಯ ಕೃಷ್ಣಪ್ಪನವರ ನಂತರ ಸಂಘಟನೆಗಳು ಹಲವು ಬಣಗಳಾಗಿವೆ ಎಲ್ಲರ ಗುರಿ ಒಂದೇ ಆಗಿದ್ದರೂ ಏಕತೆ ಸಾಧಿಸುವಲ್ಲಿ ಸಂಘಟನೆಯ ಮುಖಂಡರು ಮುಂದಾಗಬೇಕಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಹಾಜರಿದ್ದ ಜೆಡಿಎಸ್ ಮುಖಂಡ ದೊಡ್ಡಾಘಟ್ಟ ಚಂದ್ರೇಶ್ ಮಾತನಾಡಿ ಪ್ರೋಫೆಸರ್ ಬಿ.ಕೆ.ರವರು ಸ್ಥಾಪಿಸಿರುವ ಮಾತ್ರ ಸಂಘಟನೆ ಇಂದು ಅವರ ಹುಟ್ಟು ಹಬ್ಬ ಆಚರಿಸುತ್ತಿರುವುದು ನಿಜಕ್ಕೂ ಅರ್ಥಪೂರ್ಣವಾಗಿದ್ದು ಮುಂದಿನ ದಿನಗಳಲ್ಲಿ ಬಿ.ಕೆ.ರವರ ಹುಟ್ಟುಹಬ್ಬದ ದಿನದಂದು ದಲಿತ ಸಮುದಾಯದ ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹ ಧನ ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ತಾಲ್ಲೂಕಿನ ಹಿರಿಯ ಪತ್ರಕರ್ತರಾದ ಸತ್ಯನಾರಾಯಣ್ ಮಾತನಾಡಿ ದಲಿತ ಚಳುವಳಿಯ ಮುಖಂಡರು ಸಮುದಾಯ ಕಟ್ಟುವ ಕೆಲಸ ಮಾಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಪ್ರೊಫೆಸರ್ ಬಿ.ಕೃಷ್ಣಪ್ಪರವರ ಆದರ್ಶ ನಿಮಗೆ ಮಾರ್ಗದರ್ಶನವಾಗಲಿ ಎಂದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಬಿ.ಎಸ್.ವಸಂತಕುಮಾರ್, ಹಾಗೂ ದಲಿತ ಮುಖಂಡರಾದ ವಿ.ಟಿ.ವೆಂಕಟರಾಮಯ್ಯ, ಕಲ್ಲುಬೋರನಹಳ್ಳಿ ಜಯರಾಮ್, ಎನ್.ಬಿ.ರಾಮಚಂದ್ರಯ್ಯ, ದಂಡಿನಶಿವರ ಕುಮಾರ್, ಚಿದಾನಂದ್, ಗುರುದತ್, ಬೊಮ್ಮೇನಹಳ್ಳಿ ನಂದೀಶ್, ಅಧಿಕಾರಿಗಳಾದ ಸಿಧಾರ್ಥ್ ನಾರಾಯಣ್ ಸೇರಿದಂತೆ ಇತರರಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . CONTACT : 9901010109 GMAIL: suryapragathi2021@gmail.com.